

# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ 24
Read,Share and Follow - www.belagavivaradi.com
Vol-04 | Issue: 259 | ₹ ಬೆಲೆ: 4 | Friday, 08, December,2023 | newsbelagavi@gmail.com | 9900332089 | Regn,No:G-2/PMG/KA/NK/BM/139/2021-23

# ಮುಂದಿನ ವಾರದೊಳಗೆ ರೈತರಿಗೆ ಮೊದಲ ಹಂತದ ಬೆಳೆ ನಷ್ಟ ಪರಿಹಾರ ವಿತರಿಸುವಂತೆ ಸಿಎಂ ಸೂಚನೆ

ಬೆಳಗಾವಿ: ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ಇರುವ ಹಿನ್ನೆಲೆಯಲ್ಲಿ ಬೆಳೆ ನಾಶದಿಂದ ರೈತರು ಸಂಕಷ್ಟಕ್ಕೆ ಒಳಗಾಗಿದ್ದಾರೆ. ರೈತರಿಗೆ ಈಗಾಗಲೇ ಸರ್ಕಾರ ಘೋಷಿಸಿರುವ ಎರಡು ಸಾವಿರ ರೂಪಾಯಿವರೆಗಿನ ಮೊದಲ ಹಂತದ ಪರಿಹಾರವನ್ನು ಮುಂದಿನ ವಾರದೊಳಗೆ ವಿತರಿಸಲು ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ರಾಜ್ಯದಲ್ಲಿ ತಲೆದೋರಿರುವ ತೀವ್ರ ಬರಪರಿಸ್ಥಿತಿ ಹಿನ್ನೆಲೆಯಲ್ಲಿ ಅಧಿಕಾರಿಗಳು ಮತ್ತಷ್ಟು ಯುದ್ಧೋಪಾದಿಯಲ್ಲಿ ಕೆಲಸ ಮುಂದುವರಿಸಬೇಕು. ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಜಿಲ್ಲೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿರುವ ಕುರಿತಾದ ಸಮಗ್ರ ಮಾಹಿತಿಯನ್ನು ಜಿಲ್ಲಾ ಉಸ್ತುವಾರಿ ಸಚಿವರಿಗೆ ಅಂಕಿ-ಅಂಶಗಳ ಸಹಿತ ಒದಗಿಸಬೇಕು ಎಂದರು.

ಮೊದಲ ಹಂತದಲ್ಲಿ 2,000 ರೂ ಪರಿಹಾರ: ರೈತರಿಗೆ ಮೊದಲ ಹಂತದಲ್ಲಿ 2,000 ರೂ ವರೆಗೆ ಪರಿಹಾರ ಘೋಷಿಸಲಾಗಿದೆ. ಈ ಪರಿಹಾರವನ್ನು ತ್ವರಿತವಾಗಿ ವಿತರಿಸಲು ಮಾರ್ಗಸೂಚಿಗಳನ್ನು ರೂಪಿಸಿ, ಡಿ.ಬಿ.ಟಿ. ಮಾಡಲು ಅಗತ್ಯ ಕ್ರಮ ಕೈಗೊಳ್ಳಬೇಕು. ಸರ್ಕಾರ ಸಮರ್ಪಕವಾಗಿ ನಿರ್ವಹಿಸಲು ನಿಮ್ಮ ಪಾತ್ರ ಬಹುಮುಖ್ಯ. ನೀವು ಸರ್ಕಾರದ ಕಣ್ಣು, ಕಿವಿ ಇದ್ದ ಹಾಗೆ ಎಂದು ತಿಳಿಸಿದ ಮುಖ್ಯಮಂತ್ರಿಗಳು, ರಾಜಕಾರಣಿಗಳು, ಅಧಿಕಾರಿಗಳು-ನಾವೆಲ್ಲರೂ ಜನರಿಗೋಸ್ಕರ ಇರುವುದು. ಜನರ ಕೆಲಸವನ್ನು ವೇಗವಾಗಿ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಆಯವ್ಯಯ ಭಾಷಣದಲ್ಲಿ 143 ಘೋಷಣೆಗಳನ್ನು ಮಾಡಲಾಗಿದೆ. ಅದರಲ್ಲಿ ಈಗಾಗಲೇ 83 ಘೋಷಣೆಗಳಿಗೆ ಸರ್ಕಾರಿ ಆದೇಶ ಹೊರಡಿಸಿ, ಕಾರ್ಯಗತಗೊಳಿಸಲಾಗಿದೆ. ಉಳಿದ ಘೋಷಣೆಗಳನ್ನು ಶೀಘ್ರವೇ ಅನುಷ್ಠಾನಕ್ಕೆ ತರಲು ಕ್ರಮ ಕೈಗೊಳ್ಳುವಂತೆ ತಿಳಿಸಿದರು.

ಗ್ಯಾರಂಟಿ ಯೋಜನೆಗಳಲ್ಲಿ ನೋಂದಾಯಿಸಿಕೊಂಡು ಇನ್ನೂ ಸೌಲಭ್ಯ ದೊರಕದ ಅರ್ಹ ಕೆಲವು ಫಲಾನುಭವಿಗಳಿಗೆ ಸೌಲಭ್ಯ ದೊರಕಲು ಇರುವ ತಾಂತ್ರಿಕ



ಅಡಚಣೆಗಳನ್ನು ಶೀಘ್ರ ನಿವಾರಿಸಬೇಕು ಎಂದು ತಿಳಿಸಿದ ಅವರು, ಅಧಿವೇಶನ ನಡೆಯುವ ಸಂದರ್ಭದಲ್ಲಿ ಅಧಿಕಾರಿಗಳು ಕಡ್ಡಾಯವಾಗಿ ಹಾಜರಿದ್ದು, ಸಚಿವರಿಗೆ ಸೂಕ್ತ ಸಲಹೆ ನೀಡಬೇಕು ಎಂದು ಸೂಚನೆ ನೀಡಿದರು.

ಇಲಾಖೆಗಳಲ್ಲಿ ಕಡತಗಳ ವಿಲೇವಾರಿ ಸಮರ್ಪಕ ನಡೆಯಬೇಕು. ಸಚಿವ ಸಂಪುಟ ಸಭೆಯಲ್ಲಿ ಬಾಕಿ ಕಡತಗಳ ಕುರಿತು ಪ್ರಗತಿ ಪರಿಶೀಲನೆ ನಡೆಸಲಾಗುವುದು. ವಿವಿಧ ಇಲಾಖೆಗಳಲ್ಲಿ ನ್ಯಾಯಾಲಯ ಉಲ್ಲಂಘನೆಯ ಪ್ರಕರಣಗಳನ್ನು ಅಡ್ವೊಕೇಟ್ ಜನರಲ್ ಜೊತೆ ಚರ್ಚಿಸಿ ಇತ್ಯರ್ಥಕ್ಕೆ ಕ್ರಮ ಕೈಗೊಳ್ಳಬೇಕು.

ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಜಿಲ್ಲಾಧಿಕಾರಿಗಳು ಜನ ಸಂಪರ್ಕ ಸಭೆ ನಡೆಸುತ್ತಿದ್ದಾರೆಯೇ ಎಂಬುದನ್ನು ಪರಿಶೀಲಿಸಬೇಕು. ನಿಮ್ಮ ಕಾರ್ಯವೈಖರಿಗೆ ಅನುಗುಣವಾಗಿ ಸರ್ಕಾರಕ್ಕೆ ಒಳ್ಳೆಯ ಹೆಸರು ಬರುತ್ತದೆ ಎಂದರು.

ಅನಗತ್ಯ ವೆಚ್ಚಗಳಿಗೆ ಕಡಿವಾಣ: ಅನಿವಾರ್ಯ ಸಂದರ್ಭಗಳನ್ನು ಹೊರತುಪಡಿಸಿ, ಕಡತಗಳಲ್ಲಿ ಕನ್ನಡದಲ್ಲಿಯೇ ಟಿಪ್ಪಣಿ ಬರೆಯಬೇಕು. ಕನ್ನಡ ನಮ್ಮ ರಾಜ್ಯ ಭಾಷೆ, ಸಾರ್ವಭೌಮ ಭಾಷೆ, ಆದರೆ ಅನಗತ್ಯ ವೆಚ್ಚಗಳಿಗೆ ಕಡಿವಾಣ ಹಾಕುವ ಕುರಿತು ಸಲಹೆ ನೀಡಿದ ಮುಖ್ಯಮಂತ್ರಿಗಳು, ಟೆಂಡರ್ ಅಂದಾಜು ಸಿದ್ಧಪಡಿಸುವಾಗ ಎಲ್ಲ ಅಂಶಗಳನ್ನೂ ಒಳಗೊಂಡಂತೆ ಸಮಗ್ರವಾಗಿ ಅಂದಾಜು ಸಿದ್ಧಪಡಿಸಬೇಕು. ಪರಿಷ್ಕೃತ ಅಂದಾಜುಗಳನ್ನು ಸಲ್ಲಿಸುವುದರಿಂದ ಯೋಜನೆಯ ವೆಚ್ಚ ಗಣನೀಯವಾಗಿ ಹೆಚ್ಚುತ್ತಿರುವುದಲ್ಲದೆ ಅನುಷ್ಠಾನವೂ ವಿಳಂಬವಾಗುತ್ತದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಇದಕ್ಕೆ ಸಂಬಂಧಿಸಿದಂತೆ ಆರ್ಥಿಕ ಇಲಾಖೆಯು ಹಿರಿಯ ಅಧಿಕಾರಿಗಳ ಸಮಿತಿ ರಚಿಸಿದ್ದು, ಈ ಸಮಿತಿಯು ಮಾರ್ಗಸೂಚಿಗಳನ್ನು ರೂಪಿಸುತ್ತಿದೆ. ಇದು ಅಂತಿಮ ಹಂತದಲ್ಲಿದ್ದು, ಶೀಘ್ರವೇ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗುವುದು ಎಂದು ಈ ಸಂದರ್ಭದಲ್ಲಿ ಆರ್ಥಿಕ ಇಲಾಖೆ ಹಾಗೂ ಮುಖ್ಯಮಂತ್ರಿಯವರ ಅಪರ ಕಾರ್ಯದರ್ಶಿ ಎಲ್.ಕೆ.ಅತೀಕ್ ತಿಳಿಸಿದರು.

ತೆರಿಗೆ ಸಂಗ್ರಹ ಇಲಾಖೆಗಳು ಇನ್ನಷ್ಟು ಚುರುಕಾಗಿ ಕಾರ್ಯನಿರ್ವಹಿಸಬೇಕು. ಜೊತೆಗೆ ತೆರಿಗೆಯೇತರ ರಾಜಸ್ವ ಸಂಗ್ರಹ ಹೆಚ್ಚಳ ಮಾಡುವ ಬಗ್ಗೆ ಆಡಳಿತ ಸುಧಾರಣಾ ಆಯೋಗ-2 ಮಾಡಿರುವ ಶಿಫಾರಸುಗಳನ್ನು ಎಲ್ಲ ಕಾರ್ಯದರ್ಶಿಗಳು ಅಧ್ಯಯನ ಮಾಡುವಂತೆ ಸಲಹೆ ನೀಡಿದರು.



## ನ್ಯಾಯಾಲಯಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕ್ರಮ: ಸಚಿವ ಸತೀಶ್ ಜಾರಕಿಹೊಳಿ

ಬೆಳಗಾವಿ ಸುವರ್ಣ ವಿಧಾನಸೌಧ: ರಾಜ್ಯದಲ್ಲಿರುವ ಜಿಲ್ಲಾ ಮತ್ತು ತಾಲೂಕು ನ್ಯಾಯಾಲಯಗಳಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ವಿಧಾನಪರಿಷತ್‌ನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಎಸ್. ಎಲ್. ಭೋಜೇಗೌಡ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿ, ಪ್ರಸಕ್ತ ಸಾಲಿನಲ್ಲಿ ಲೋಕೋಪಯೋಗಿ ಇಲಾಖೆಯಿಂದ 623.96 ಕೋಟಿ ರೂ ಮೊತ್ತದಲ್ಲಿ ನ್ಯಾಯಾಲಯ ಕಟ್ಟಡ ಹಾಗೂ ನ್ಯಾಯಾಂಗ ಆಧಿಕಾರಿಗಳ ವಸತಿ ಸಮುಚ್ಛಯ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಈ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು.

ನ್ಯಾಯಾಲಯ ಕಟ್ಟದ ಹಾಗೂ ವಸತಿಗೃಹಗಳ ನಿರ್ವಹಣೆ ಕಾಮಗಾರಿಗಳನ್ನು ಸಹ ಲೋಕೋಪಯೋಗಿ ಇಲಾಖೆ ಕಟ್ಟಡಗಳ ನಿರ್ವಹಣೆಯಡಿ ಒದಗಿಸಿದ ಅನುದಾನದಲ್ಲಿ ಕೈಗೆತ್ತಿಕೊಂಡು ಸುಸ್ಥಿತಿಯಲ್ಲಿಡಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

## ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ ಸೂಕ್ತ ಕಾನೂನು ಕ್ರಮ: ಗೃಹ ಸಚಿವ ಡಾ.ಜಿ.ಪರಮೇಶ್ವರ್



ಬೆಳಗಾವಿ ಸುವರ್ಣ ವಿಧಾನಸೌಧ: ರಾಜ್ಯದಲ್ಲಿ ಈಗಾಗಲೇ ವಾಸಿಸುತ್ತಿರುವ ಅಕ್ರಮ ಬಾಂಗ್ಲಾ ವಲಸಿಗರು ಮತ್ತು ವಿದೇಶಿ ವಲಸಿಗರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಸೂಕ್ತ ಕಾನೂನುಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಗೃಹ ಸಚಿವರಾದ ಡಾ.ಜಿ.ಪರಮೇಶ್ವರ್ ಹೇಳಿದರು.

ವಿಧಾನ ಪರಿಷತ್‌ನಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಉಮಾಶ್ರೀ ಅವರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ರಾಜ್ಯದಲ್ಲಿನ ಈಗಾಗಲೇ ವಾಸಿಸುತ್ತಿರುವ ಅಕ್ರಮ ಬಾಂಗ್ಲಾ ವಲಸಿಗರು ಮತ್ತು ವಿದೇಶಿ ವಲಸಿಗರನ್ನು ಪತ್ತೆ ಹಚ್ಚುವ ಸಲುವಾಗಿ ಗುಪ್ತಚರ ವಿಭಾಗದ ಸಿಬ್ಬಂದಿ, ಠಾಣ ಸಿಬ್ಬಂದಿಯು ಸೂಕ್ತ ಗಸ್ತು ಮಾಡುವ ಮೂಲಕ ಪತ್ತೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಅಂತಹ ಅಕ್ರಮ ವಲಸಿಗರನ್ನು ಪತ್ತೆ ಹಚ್ಚಿ ಸೂಕ್ತಕ್ರಮ ಕೈಗೊಳ್ಳುವಂತೆ ಎಫ್.ಆರ್.ಆರ್.ಓ ಅವರ ಮುಂದೆ ಮುಂದಿನ ಕ್ರಮಕ್ಕಾಗಿ ಹಾಜರುಪಡಿಸಲಾಗುವುದು ಎಂದರು.

ರಾಜ್ಯದಲ್ಲಿ ಇದುವರೆಗೆ ಅಕ್ರಮ ಬಾಂಗ್ಲಾ ಮತ್ತು ವಿದೇಶಿಯರ ವಿರುದ್ಧ 764 ಪ್ರಕರಣಗಳು ದಾಖಲಾಗಿದ್ದು,

ಅದರಲ್ಲಿ ಅಕ್ರಮ ಬಾಂಗ್ಲಾ ವಲಸಿಗರ ವಿರುದ್ಧ 53 ಪ್ರಕರಣ ಹಾಗೂ ವಿದೇಶಿಯರ ವಿರುದ್ಧ 711 ಪ್ರಕರಣಗಳು ದಾಖಲಾಗಿದ್ದು, 135 ಅಕ್ರಮ ಅಕ್ರಮ ಬಾಂಗ್ಲಾ ವಲಸಿಗರನ್ನು ಪತ್ತೆ ಹಚ್ಚಲಾಗಿದೆ ಎಂದರು.

ಈ ಅಕ್ರಮ ವಲಸಿಗರಿಗೆ ನಕಲಿ ಆಧಾರ್ ಕಾರ್ಡ್ ಹಾಗೂ ಇನ್ನಿತರ ದಾಖಲೆಗಳನ್ನು ಸೃಷ್ಟಿಸಿ ಕೊಡುತ್ತಿರುವ ಏಜೆಂಟ್‌ಗಳ ವಿರುದ್ಧ 4 ಹಾಗೂ ಮಧ್ಯವರ್ತಿಗಳ ವಿರುದ್ಧ 4 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದರು.



## ಕಾರವಾರದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯಾಗಿ ಮೇಲ್ದರ್ಜೆಗೇರಿಸುವಿಕೆ: ಸರಕಾರದ ಹಂತದಲ್ಲಿ ಪರಿಶೀಲನೆ

ಬೆಳಗಾವಿ ಸುವರ್ಣಸೌಧ: ಕಾರವಾರದ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಆವರರಣದಲ್ಲಿ ನಿರ್ಮಾಣವಾಗುತ್ತಿರುವ 450 ಹಾಸಿಗೆ ಸಾಮರ್ಥ್ಯವುಳ್ಳ ಆಸ್ಪತ್ರೆಯನ್ನು ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಯನ್ನಾಗಿ ಮೇಲ್ದರ್ಜೇಗೇರಿಸುವ ಕುರಿತ ಬೇಡಿಕೆಗಳು ಸರಕಾರದಲ್ಲಿ ಸ್ವೀಕೃತವಾಗಿಸ್ಸು, ಪರಿಶೀಲನೆಯಲ್ಲಿವೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಶರಣಪ್ರಕಾಶ ಪಾಟೀಲ್ ಅವರು ಹೇಳಿದರು.

ವಿಧಾನಸಭೆಯಲ್ಲಿ ಸದಸ್ಯ ಸತೀಶ್‌ಕೃಷ್ಣ ಸೈಲ್ ಅವರ ಪ್ರಶ್ನೆಗೆ ಉತ್ತರಿಸಿದ ಅವರು ಕಾರವಾರ ವೈದ್ಯಕೀಯ ಮಹಾವಿದ್ಯಾಲಯದ ಆಸ್ಪತ್ರೆಯಲ್ಲಿ ಸೂಪರ್ ಸ್ಪೆಷಾಲಿಟಿ ಸೇವೆಗಳನ್ನು ಒದಗಿಸುವ ಸಲುವಾಗಿ ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾಸ್ಪತ್ರೆಗೆ ಮಂಜೂರಾಗಿದ್ದ 04 ತಜ್ಞ ವೈದ್ಯರು ಹಾಗೂ 03 ಉಪಮುಖ್ಯ ವೈದ್ಯಾಧಿಕಾರಿ ಹುದ್ದೆಗಳು ಸೇರಿದಂತೆ ಒಟ್ಟು 07 ಹುದ್ದೆಗಳನ್ನು ಪ್ರಾಧ್ಯಾಪಕರು/ಸೂಪರ್ ಸ್ಪೆಷಲಿಸ್ಟ್ ಹುದ್ದೆಗಳನ್ನಾಗಿ ಮರುಪದನಾಮೀಕರಿಸಿ ಆದೇಶಿಸಲಾಗಿದೆ ಎಂದರು.

ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ಮಂಜೂರಾಗಿರುವ ಹುದ್ದೆಗಳಿಗೆ ಈಗಾಗಲೇ 2 ಬಾರಿ ನೇರ ಸಂದರ್ಶನ ಕರೆಯಲಾಗಿದ್ದು, ಆದರೇ ಯಾವ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಿರುವುದಿಲ್ಲ. ಆದ್ದರಿಂದ ಸದರಿ ಹುದ್ದೆಗಳನ್ನು ಮತ್ತೊಮ್ಮೆ ನೇರ ಸಂದರ್ಶನದ ಮೂಲಕ ಭರ್ತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಿ ಅನುಮತಿ ನೀಡಲಾಗಿದೆ ಎಂದು ಸಚಿವ ಪಾಟೀಲ್ ಅವರು ವಿವರಿಸಿದರು.

## ಕುಡಿವ ನೀರಿಗೆ ಜಿಪಂಗಳಿಗೆ ಪ್ರತ್ಯೇಕ ಅನುದಾನ: ಸಚಿವ ಪ್ರಿಯಾಂಕ್ ಖರ್ಗೆ




ಬೆಳಗಾವಿ ಸುವರ್ಣ ವಿಧಾನಸೌಧ: ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಂತರ್ಜಲಮಟ್ಟ ಕುಸಿತವಾಗಿದ್ದು, ಈ ಕುರಿತು ಅಧ್ಯಯನ ಮಾಡಿ ಸೂಕ್ತ ಶಿಪಾರಸ್ಸು ಮಾಡಲು ತಜ್ಞರೊಳಗೊಂಡ ವಾಟರ್ ಅಡಿಟ್ ಕಮಿಟಿಯನ್ನು ರಚಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಹೇಳಿದರು.

ವಿಧಾನಸಭೆಯಲ್ಲಿ ಡಿಸೆಂಬರ್ 7ರಂದು ನಡೆದ ಬರ ವಿಷಯದ ಮೇಲಿನ ಚರ್ಚೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಬರ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿರ್ವಹಿಸಲು ರಾಜ್ಯ ಸರಕಾರವು ಎಲ್ಲಾ ರೀತಿಯ ಮುಂಜಾಗೃತಾ ಕ್ರಮಗಳನ್ನು ಕೈಗೊಂಡಿದೆ. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖಾಂತರ ಪ್ರತಿ ಜಿಲ್ಲೆಯಲ್ಲಿ ಕಂಟಿಜೆನ್ಸಿ ಪ್ಲಾನ್ ತಯಾರಿಸಲಾಗಿದ್ದು, ಪ್ರತಿ ತಿಂಗಳು ತಾವು ವಿಡಿಯೊ ಕಾನ್ಫರೆನ್ಸ್ ಮೂಲಕ ಸಭೆ ಜರುಗಿಸಿ ಪ್ರಗತಿ ಪರಿಶೀಲನೆ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಬರ ನಿರ್ವಹಣೆಯಲ್ಲಿ ಲೋಪವಾಗದಂತೆ, ಮುಂದಿನ ದಿನಗಳಲ್ಲಿ ಉದ್ಭವಿಸಬಹುದಾದ ಬರ ಹಿನ್ನೆಲೆಯ ಸಮಸ್ಯೆಗಳ ಬಗ್ಗೆ ಸರಕಾರವು ಮುನ್ನೆಚ್ಚರಿಕೆ ವಹಿಸಿದೆ. ಪ್ರತಿ ಜಿಲ್ಲಾ ಪಂಚಾಯತಿಯ ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗದಲ್ಲಿ ಕುಡಿಯುವ ನೀರಿಗಾಗಿ 1 ಕೋಟಿ ರೂ.ಗಳ ಹಣವನ್ನು ಪ್ರತ್ಯೇಕವಾಗಿ ಬಿಡುಗಡೆ ಮಾಡಲಾಗಿದೆ. ಸದನ ಸದಸ್ಯರ ಸಲಹೆ ಮೇರೆಗೆ ಅಗತ್ಯವಿರುವ ಕ್ರಮವಹಿಸುವುದಾಗಿ ಅವರು ತಿಳಿಸಿದರು.

## ವಿಧಾನಸಭೆಯಲ್ಲಿ ಸಿಎಂ ಆಸನದ ಮೇಲೆ ಕುಳಿತು ಯಡವಟ್ಟು ಮಾಡಿದ ಶಾಸಕಿ ಮೋಟಮ್ಮ



ಬೆಳಗಾವಿ: ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರನ್ನು ಭೇಟಿ ಮಾಡೋದಕ್ಕೆ ವಿಧಾನಸಭೆಯ ಸದನಕ್ಕೆ ತೆರಳಿದ್ದಂತ ಮೂಡುಗೆರೆ ಶಾಸಕಿ ನಯನಾ ಮೋಟಮ್ಮ ಮಹಾ ಯಡವಟ್ಟು ಮಾಡಿದ್ದಾರೆ.

ಅಚಾನಕ್ಕಾಗಿ ಸಿಎಂ ಆಸನದ ಮೇಲೆ ಕುಳಿತು ಮೂಡಿಗೆರೆ ಶಾಸಕಿ ನಯನಾ ಮೋಟಮ್ಮ ಮಹಾ ಯಡವಟ್ಟು ಮಾಡಿದ್ದಾರೆ. ವಿಧಾನಸಭೆಯಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಭೇಟಿಗಾಗಿ ತೆರಳಿದ್ದಾಗ ಈ ಯಡವಟ್ಟು ನಡೆದಿದೆ. ಡಿಸಿಎಂ ಡಿಕೆ ಶಿವಕುಮಾರ್ ಜೊತೆಗೆ ಮಾತನಾಡುತ್ತಿದ್ದ ವೇಳೆಯಲ್ಲಿ ಅಚಾನಕ್ ಆಗಿ ಸಿಎಂ ಆಸನದ ಮೇಲೆ ಕುಳಿತುಕೊಂಡಿದ್ದಾರೆ. ಕೂಡಲೇ ಇದನ್ನ ಗಮನಿಸಿದಂತ ಡಿಸಿಎಂ ಡಿಕೆ ಶಿವಕುಮಾರ್ ನಯನಾ ಮೋಟಮ್ಮ ಅವರನ್ನು ಕೂರದಂತೆ ಕೈಹಿಡಿದು ಸೂಚಿಸಿದ್ದಾರೆ. ಇದಷ್ಟೇ ಅಲ್ಲದೇ ಸಿಎಂ ಆಸನದ ಅದು, ಅದರಲ್ಲಿ ಕೂರಬಾರದು. ಇಲ್ಲಿಂದ ತೆರಳುವಂತೆ ಶಾಸಕಿ ನಯನಾ ಮೋಟಮ್ಮಗೆ ಡಿಸಿಎಂ ಡಿಕೆಶಿ ಸೂಚಿಸಿದ್ದಾರೆ. ಕೂಡಲೇ ಅವರ ಸೂಚನೆಯಂತೆ ಸದನದಿಂದ ಹೊರ ನಡೆದಿದ್ದಾರೆ.

## ವಿದ್ಯಾರ್ಥಿಗಳಿಗೆ ಉಚಿತ ಬೈಸಿಕಲ್ ವಿತರಣೆ: ಮುಖ್ಯಮಂತ್ರಿಗಳೊಂದಿಗೆ ಚರ್ಚೆ: ಸಚಿವ ಮಧುಬಂಗಾರಪ್ಪ

ಬೆಳಗಾವಿ: ಸುವರ್ಣಸೌಧ: ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಉಚಿತ ಬೈಸಿಕಲ್ ವಿತರಣೆ ಕಾರ್ಯಕ್ರಮ ಆರಂಭಿಸುವುದಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧುಬಂಗಾರಪ್ಪ ಅವರು ತಿಳಿಸಿದರು.

ವಿಧಾನಸಭೆಯಲ್ಲಿ ಸದಸ್ಯ ಪ್ರದೀಪ್ ಈಶ್ವರ್ ಅವರು ಕೇಳಿದ ಚುಕ್ಕೆಗುರುತಿನ ಪ್ರಶ್ನೆಗೆ ಅವರು ಉತ್ತರಿಸಿದರು.

ರಾಜ್ಯದಲ್ಲಿ ಈ ಹಿಂದೆ 2019-20ನೇ ಸಾಲಿನಲ್ಲಿ ಉಚಿತ ಬೈಸಿಕಲ್ ವಿತರಣೆ ಮಾಡಲಾಗಿರುತ್ತದೆ. ಪ್ರಸ್ತುತ ಸಾಲಿನಲ್ಲಿ ಸರಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಬೈಸಿಕಲ್ ವಿತರಿಸಲಾಗುತ್ತಿಲ್ಲ. ಆದರೇ, ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಶಾಲೆಗೆ ನಿರಂತರವಾಗಿ ಹಾಜರಾಗಲು ಅನುಕೂಲವಾಗುವಂತೆ ಸರಕಾರಿ ಬಸ್‌ಗಳಲ್ಲಿ ಪ್ರಯಾಣಿಸಲು ಉಚಿತವಾಗಿ ಬಸ್ ಪಾಸ್ ವಿತರಿಸಲಾಗುತ್ತಿದೆ.

ಸಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಕೇಂದ್ರ ಪ್ರಾಯೋಜಿತ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆ ಅಡಿಯಲ್ಲಿ ತಮ್ಮ ವ್ಯಾಪ್ತಿಯನ್ನು ಮೀರಿದ ಶಾಲೆಗಳಿಗೆ ಕ್ರಮಿಸಲು ಪ್ರತಿ ವಿದ್ಯಾರ್ಥಿಗೆ ಮಾಹೆಯಾನ



600 ರೂ.ಗಳಂತೆ ಆರು ತಿಂಗಳಿಂದ ಸಾರಿಗೆ ಭತ್ಯೆ ನೀಡಲಾಗುತ್ತಿದೆ ಎಂದರು.

ರಾಜ್ಯದಲ್ಲಿ 1ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಸರಕಾರಿ ಶಾಲಾ ಮಕ್ಕಳಿಗೆ ವಿದ್ಯಾವಿಕಾಸ ಯೋಜನೆ ಅಡಿ ಒಂದು ಜೊತೆ ಶೂ ಮತ್ತು ಎರಡು ಜೊತೆ ಸಾಕ್ಸ್ ಉಚಿತವಾಗಿ ನೀಡಲಾಗುತ್ತಿದೆ ಎಂದರು.

7098 ಶಾಲೆಗಳಿಗೆ 9604 ಕೊಠಡಿಗಳ ನಿರ್ಮಾಣ: 2020-21ರಿಂದ 2022-23ನೇ ಸಾಲಿನವರೆಗೆ 7098 ಶಾಲೆಗಳಿಗೆ 9604 ಕೊಠಡಿಗಳ ನಿರ್ಮಾಣ ಹಾಗೂ ಇತರೆ ಕಾಮಗಾರಿಗಳಿಗೆ ಒಟ್ಟು 129768.90ಲಕ್ಷಗಳು ನಿಗದಿಯಾಗಿದ್ದು, ರೂ.9450.139 ಲಕ್ಷಗಳನ್ನು ಬಿಡುಗಡೆ ಮಾಡಿ ಕ್ರಮವಹಿಸಲಾಗಿದೆ ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ಅವರು ಸದಸ್ಯ ಯು.ಬಿ.ಬಣಕಾರ್ ಅವರ ಪ್ರಶ್ನೆಗೆ ಉತ್ತರಿಸಿದರು.

ಈ ಕೊಠಡಿಗಳ ನಿರ್ಮಾಣಕ್ಕೆ ಕೊರತೆ ಅನುದಾನವನ್ನು 2023-24ನೇ ಸಾಲಿನಲ್ಲಿ ಒದಗಿಸಲು ಕ್ರಮವಹಿಸಲಾಗಿದೆ.

ಆಯವ್ಯಯದಲ್ಲಿ ಒದಗಿಸಲಾದ ಅನುದಾನ ಲಭ್ಯತೆ ಆಧರಿಸಿ ಅಗತ್ಯತೆಗೆ ಅನುಗುಣವಾಗಿ ಹಂತಹಂತವಾಗಿ ರಾಜ್ಯಾದ್ಯಂತ ಶಾಲೆಗಳಲ್ಲಿ ಕೊಠಡಿ ನಿರ್ಮಾಣ ಮಾಡಲು ಅಗತ್ಯ ಕ್ರಮವಹಿಸಲಾಗುತ್ತಿದೆ ಎಂದರು.

ಮಲೆನಾಡು ಭಾಗದ ಎಲ್ಲ ಸರಕಾರಿ ನೌಕರರಿಗೆ 6ನೇ ರಾಜ್ಯ ವೇತನ ಆಯೋಗದ ಶಿಫಾರಸ್ಸಿನ ಅನ್ವಯ ಗಿರಿತಾಣ ಭತ್ಯೆ ರದ್ದುಪಡಿಸಿ ಆದೇಶಿಸಿರುವುದರಿಂದ ಚಿಕ್ಕಮಗಳೂರು ಜಿಲ್ಲೆಯ ಗುಡ್ಡಗಾಡು ಪ್ರದೇಶಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರಿಗೆ ಸದ್ಯಕ್ಕೆ ಗಿರಿಭತ್ಯೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ ಎಂದು ಸದಸ್ಯ ನಯನಾ ಮೋಟಮ್ಮ ಅವರ ಪ್ರಶ್ನೆಗೆ ಸಚಿವ ಮಧುಬಂಗಾರಪ್ಪ ಅವರು ಉತ್ತರಿಸಿದರು.

## ಮಾನವ- ಕಾಡು ಪ್ರಾಣಿಗಳ ಸಂಘರ್ಷ ತಡೆಗೆ ಅಗತ್ಯ ಕ್ರಮ: ಅರಣ್ಯ ಸಚಿವ ಖಂಡ್ರೆ

ಬೆಳಗಾವಿ: ಬೆಂಗಳೂರಿನಲ್ಲಿ 2500 ಎಕರೆ ಅರಣ್ಯ ಭೂಮಿ ಒತ್ತುವರಿಯಾಗಿದ್ದು, 403 ಎಕರೆ ಅರಣ್ಯ ಭೂಮಿ ಒತ್ತುವರಿ ತೆರವುಗೊಳಿಸಲಾಗಿದೆ. ಉಳಿದ ಒತ್ತುವರಿ ತೆರವುಗೊಳಿಸುವುದಕ್ಕೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆ" ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ವಿಧಾನಸಭೆಯಲ್ಲಿ ತಿಳಿಸಿದರು.



ಪ್ರಶ್ನೋತ್ತೋರ ಅವಧಿಯಲ್ಲಿ ಗುರುವಾರ ಬಿಜೆಪಿ ಸದಸ್ಯ ಎಂ. ಸತೀಶರೆಡ್ಡಿ ಅವರ ಪ್ರಶ್ನೆಗೆ ಉತ್ತರಿಸಿದ ಅವರು, "ಒತ್ತುವರಿ ತೆರವು ಕಾರ್ಯಕ್ಕೆ ಬೆಂಗಳೂರಿನ ಶಾಸಕರು ಸಹ ಕೈಜೋಡಿಸಬೇಕು. ಈಗಾಗಲೇ ಬೆಂಗಳೂರಿನಲ್ಲಿ 500 ಹೆಕ್ಟೇರ್ ಅರಣ್ಯ ಪ್ರದೇಶ ಕಡಿಮೆಯಾಗಿದ್ದು, ಮಾನವ – ವನ್ಯಜೀವಿ ಸಂಘರ್ಷ ಬೆಂಗಳೂರು ಮಹಾನಗರದಲ್ಲಿಯೂ ಕಂಡು ಬರುತ್ತಿದೆ" ಎಂದು ಹೇಳಿದರು.

ಕಾಡಾನೆ ಹಾವಳಿ ತಡೆಗಟ್ಟಲು ಬನ್ನೇರಘಟ್ಟ ರಾಷ್ಟ್ರೀಯ ಉದ್ಯಾನ ಬೆಂಗಳೂರು ಕೇಂದ್ರ ಸ್ಥಾನದಲ್ಲಿ ಜಿಲ್ಲಾ ಆನೆ ಕಾರ್ಯಪಡೆ ರಚಿಸಲಾಗಿದೆ. ಬೆಂಗಳೂರು ಜಿಲ್ಲೆಯ ಕಗ್ಗಲೀಪುರ, ಆನೇಕಲ್, ಯಲಹಂಕ, ಹೊಸಕೋಟೆ, ಕೆ.ಆರ್. ಪುರ ವಲಯಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಚಿರತೆಯ ಹಾವಳಿ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲಾ ಚಿರತೆ ಕಾರ್ಯಪಡೆ ರಚಿಸಲಾಗಿದೆ. ಬೆಂಗಳೂರು ನಗರ ವಿಭಾಗದಲ್ಲಿ ಮಾನವ, ವನ್ಯಜೀವಿ ಸಂಘರ್ಷ ತಡೆಗಟ್ಟಲು ಕಗ್ಗಲೀಪುರ ವಲಯದಲ್ಲಿ ಮೂರು ಮತ್ತು ಆನೇಕಲ್ ವಲಯದಲ್ಲಿ ಮೂರು ವನ್ಯಪ್ರಾಣಿ ಹಿಮ್ಮೆಟ್ಟಿಸುವ ತಂಡಗಳನ್ನು ನಿರ್ವಹಿಸಲಾಗುತ್ತಿದೆ. ಅಲ್ಲದೇ ಕಾಡಂಚಿನ ಗ್ರಾಮಗಳಲ್ಲಿ ವನ್ಯಜೀವಿ, ಅರಣ್ಯ ರಕ್ಷಣೆ ಬಗ್ಗೆ ಸಾರ್ವಜನಿಕ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ" ಎಂದು ತಿಳಿಸಿದರು.

## ಡಯಾಲಿಸಿಸ್ ರೋಗಿಗಳಿಗೆ ಗುಡ್ ನ್ಯೂಸ್: ಹೊಸದಾಗಿ 800 ಯಂತ್ರಗಳ ಅವಳವಡಿಕೆ



ಬೆಳಗಾವಿ: ಈಗಾಗಲೇ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಯಂತ್ರಗಳಿದ್ದಾವೆ. ರೋಗಿಗಳಿಗೆ ಚಿಕಿತ್ಸೆ ಕೂಡ ನೀಡಲಾಗುತ್ತಿದೆ. ಆದ್ರೇ ರೋಗಿಗಳು ಹೆಚ್ಚಾದಂತೆ, ಯಂತ್ರಗಳ ಸಂಖ್ಯೆ ಕಡಿಮೆಯಾಗಿತ್ತು. ಹೀಗಾಗಿ ಇನ್ನೂ 800 ಹೊಸದಾಗಿ ಯಂತ್ರಗಳ ಅಳವಡಿಕೆಗೆ ರಾಜ್ಯ ಸರ್ಕಾರ ನಿರ್ಧರಿಸಿದೆ.

ವಿಧಾನಸಭೆಯಲ್ಲಿ ಗುರುವಾರ ಸದಸ್ಯರೊಬ್ಬರ ಪ್ರಶ್ನೆ ಉತ್ತರಿಸಿದಂತ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರು, ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೇವೆಯನ್ನು ಸುವ್ಯವಸ್ಥೆಗೆ ತರಲು ಹಾಗೂ ಸಮರ್ಪಕವಾಗಿ ನಿರ್ವಹಿಸಲು ಕ್ರಮಗಳನ್ನು ಕೈಗೊಳ್ಳಲಾಗಿದೆ. ಡಯಾಲಿಸಿಸ್ ಸಿಬ್ಬಂದಿಗಳ ಬೇಡಿಕೆಗಳನ್ನು ಈಡೇರಿಸುವ ಕುರಿತು ಸರ್ಕಾರ ಮಾತುಕತೆ ನಡೆಸಿದ್ದು, ನೌಕರರು ಈಗಾಗಲೇ ಪ್ರತಿಭಟನೆಯನ್ನು ಕೈಬಿಟ್ಟು ಕರ್ತವ್ಯಕ್ಕೆ ಹಾಜರಾಗಿದ್ದಾರೆ ಎಂದು ತಿಳಿಸಿದರು.

## ಹೊಸ ವಿವಿಗಳಿಗೆ ಮೂಲಭೂತ ಸೌಕರ್ಯ ನೀಡುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚೆ: ಸಚಿವ ಡಾ:ಎಂ.ಸಿ .ಸುಧಾಕರ್

ಬೆಳಗಾವಿ ಸುವರ್ಣಸೌಧ: ರಾಜ್ಯದಲ್ಲಿ 2023-24ನೇ ಸಾಲಿನಲ್ಲಿ ಹೊಸದಾಗಿ ಸ್ಥಾಪಿಸಲಾಗಿರುವ ಚಾಮರಾಜನಗರ, ಹಾಸನ ಬೀದರ್, ಕೊಪ್ಪಳ,ಹಾವೇರಿ,ಕೊಡಗು ಮತ್ತು ಬಾಗಲಕೋಟೆ ವಿವಿಗಳಿಗೆ ಅಗತ್ಯ ಮೂಲ ಸೌಕರ್ಯ ಒದಗಿಸುವ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಂದು ಉನ್ನತ ಶಿಕ್ಷಣ ಡಾ: ಎಂ.ಸಿ. ಸುಧಾಕರ್ ತಿಳಿಸಿದರು.

ಅವರು ಗುರುವಾರ ವಿಧಾನಪರಿಷತ್‌ನಲ್ಲಿ ಸದಸ್ಯ ಗೋವಿಂದರಾಜು ಮತ್ತು ಕೆ.ಎ.ತಿಪ್ಪೇಸ್ವಾಮಿ ಹಾಗೂ ಸೂರಜ್ ರೇವಣ್ಣ ಅವರ, ಪ್ರಾದೇಶಿಕ ಅಸಮತೋಲನ ನಿರ್ಮೂಲನೆ ಮಾಡುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ಮೂಲಕ ವಾರ್ಷಿಕ ನೊಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಸ್ಥಾಪಿತವಾಗಿರುವ ವಿಶ್ವವಿದ್ಯಾಲಯಗಳಲ್ಲಿನ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಕುರಿತ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿ ಮಾತನಾಡಿದರು.

2022-23ನೆ ಸಾಲಿನ ಆಯವ್ಯಯ ಘೋಷಣೆಯನ್ವಯ ಹೆಚ್ಚುವರಿ ಮಾನವ ಸಂಪನ್ಮೂಲ ಉಪಯೋಗಿಸದೆ ಕಾರ್ಯನಿರ್ವಹಿಸಲಿರುವ ಸ್ನಾತಕೋತ್ತರ ಕೇಂದ್ರಗಳಲ್ಲಿ ಲಭ್ಯವಿರುವ ಸೌಲಭ್ಯಗಳನ್ನು ಬಳಸುವ ಪ್ರಸ್ತಾಪಿತ ನೂತನ ವಿವಿಗಳಿಗೆ ಹಂಚಿಕೆಯಾದ ವಾರ್ಷಿ 2 ಕೋಟಿ ರೂ ಆವರ್ತಕ ವೆಚ್ಚದಲ್ಲಿ ಸರ್ಕಾರದ ಆದೇಶದಂತೆ ರಾಜ್ಯದಲ್ಲಿ ನೂತನವಾಗಿ ಸೃಜಿಸಲಾದ ಚಾಮರಾಜನಗರ, ಹಾಸನ,ಬೀದರ್,ಕೊಪ್ಪಳ,ಹಾವೇರಿ,ಕೊಡಗು ಮತ್ತು ಬಾಗಲಕೋಟೆ ವಿವಿಗಳಿಗೆ ವೇತನ ಪಾವತಿಗಾಗಿ ತಲಾ ರೂ 1 ಕೋಟಿ ರೂ.ಗಳಂತೆ 7 ಕೋಟಿ ರೂ.ಗಳನ್ನು ಪುನರ್ವಿನಿಯೋಗದ ಮೂಲಕ ಬಿಡುಗಡೆಗೊಳಿಸಿ ಆದೇಶಿಸಿದೆ.

ಪ್ರಸ್ತಾಪಿತ ನೂತನ ವಿವಿಗಳಿಗೆ ಮಾತ್ರ



ವಿವಿಗಳಿಂದ ವರ್ಗಾವಣೆ ಮಾಡಿರುವ ಬೋಧಕ-ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 58 ರನ್ವಯ ಕ್ರಮವಹಿಸುವ ಕುರಿತು ಅವಕಾಶವನ್ನು ಕಲ್ಪಿಸಲಾಗಿದ್ದು, ಅದರನ್ವಯ ಸರ್ಕಾರದ ಹಂತದಲ್ಲಿ ನೂತನ ವಿವಿಗಳಿಗೆ ಪ್ರಸ್ತಾಪಿತ ಬೋಧಕ-ಬೋಧಕೇತರ ಸೇವಾ ಭದ್ರತೆಗೆ ಸಂಬಂಧಿಸಿದಂತೆ ನಿರ್ದೇಶನ ನೀಡಲು ಕ್ರಮವಹಿಸಲಾಗಿದೆ ಎಂದು ತಿಳಿಸಿದರು.

ಈ ಹೊಸ ವಿವಿಗಳ ಮೂಲಭೂತ ಸೌಕರ್ಯಗಳ ಕೊರತೆಯನ್ನು ನೀಗಿಸುವ ಕುರಿತಂತೆ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಸ್ಪಷ್ಟ ನಿಲುವು ಪ್ರಕಟಿಸಲಾಗುವುದು ಎಂದರು.

ಪ್ರಾದೇಶಿಕ ಅಸಮತೋಲನ ನಿರ್ಮೂಲನೆ ಮಾಡುವ ಮತ್ತು ಶೈಕ್ಷಣಿಕವಾಗಿ ಹಿಂದುಳಿದಿರುವ ಜಿಲ್ಲೆಗಳಲ್ಲಿ ಉನ್ನತ ಶಿಕ್ಷಣದ ಮೂಲಕ ವಾರ್ಷಿಕ ನೊಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ಮಾದರಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಿ ಅಲ್ಲಿನ ಸಮುದಾಯಕ್ಕೆ ಸವಕಾಶವನ್ನು ಸ್ಥಳೀಯವಾಗಿ ಕಲ್ಪಿಸಿ, ಯುವ ಜನಾಂಗವನ್ನು ದೇಶದ ಫಲಪ್ರದವಾಗಿ ಬೆಳೆಸಲು ಸಹಯೋಗ ನೀಡುವ ನಿಟ್ಟಿನಲ್ಲಿ ಈ ಹೊಸ ವಿವಿಗಳನ್ನು ಸ್ಥಾಪಿಸಲಾಗಿದ್ದು, ಹೀಗೆ ಸ್ಥಾಪಿತವಾಗಿರುವ ವಿವಿಗಳಲ್ಲಿ ಸಂಯೋಜಿತ ಕಾಲೇಜುಗಳ ಸಂಖ್ಯೆಯು ಹಳೆಯ ವಿವಿಗಳ ರೀತಿಯಲ್ಲಿ ಇಲ್ಲದೇ ಇರುವುದು,

ಸ್ವಂತ ಕಟ್ಟಡ ಇಲ್ಲದೇ ಇರುವುದು ಹಾಗೂ ಖಾಯಂ ಸ್ವರೂಪದ ಬೋಧಕ-ಬೋಧಕೇತರ ಸಿಬ್ಬಂದಿ, ಆರ್ಥಿಕ ಮುಗ್ಗಟ್ಟು ಮತ್ತು ಸರ್ಕಾರದ ಅನುದಾನ ಇಲ್ಲದೇ ಇರುವುದು ಮುಂತಾದ ಹಲವಾರು ಸಮಸ್ಯೆಗಳಿಂದ ನೂತನ ವಿವಿಗಳು ಸೊರಗಿವೆ, ಹಲವು ವಿವಿಗಳು ಸ್ನಾತಕೋತ್ತರ ಕೇಂದ್ರಗಳ ಸ್ವರೂಪದಲ್ಲೇ ಕಾರ್ಯನಿರ್ವಹಿಸುತ್ತಿವೆ; ಅದರಲ್ಲೂ ಕಲ್ಯಾಣ ಕರ್ನಾಟಕ ಜನರ ಬೇಡಿಕೆ ಮತ್ತು ಆಶೋತ್ತರಗಳಿಗೆ ಸ್ಪಂದಿಸುವ ಹಾಗೂ ಪ್ರಾದೇಶಿಕ ಅಸಮತೋಲನವನ್ನು ನಿರ್ಮೂಲನೆ ಮಾಡುವ ಮತ್ತು ಜಿಲ್ಲೆಗಳ ಉನ್ನತ ಶಿಕ್ಷಣದ ವಾರ್ಷಿಕ ನೊಂದಣಿ ಅನುಪಾತವನ್ನು ಸುಧಾರಿಸುವ ನಿಟ್ಟಿನಲ್ಲಿ ತೆರೆದಿರುವ ಜಿಲ್ಲಾ ಮಟ್ಟದಲ್ಲಿರುವ ವಿವಿಗಳು ಇನ್ನೂ ಟೇಕಾಫ್ ಆಗಿಲ್ಲ ಎಂಬ ವಿಷಯದ ಕುರಿತಂತೆ ಸದಸ್ಯ ಗೋವಿಂದರಾಜು ಮತ್ತು ಕೆ.ಎ.ತಿಪ್ಪೇಸ್ವಾಮಿ ಹಾಗೂ ಸೂರಜ್ ರೇವಣ್ಣ ಅವರಿಗೆ ಪೂರಕವಾಗಿ ಸದಸ್ಯರಾದ ತಳವಾರ ಸಾಬಣ್ಣ, ರವಿಕುಮಾರ್, ಹನುಮಂತ ನಿರಾಣಿ ಮಾತನಾಡಿದರು.

# ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳ

## ಮಹಿಳೆಯರು ಸ್ವಯಂ ಉದ್ಯೋಗ ಕೈಗೊಂಡು ದೇಶದ ಆರ್ಥಿಕತೆ ಎತ್ತಿ ಹಿಡಿಯಬೇಕು: ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಳಗಾವಿ: ಮಹಿಳೆಯರು ದೌರ್ಜನ್ಯ ಹಾಗೂ ಶೋಷಣೆಗೊಳಗಾದ ವರ್ಗ ಅವರು ಶಿಕ್ಷಣ ಪಡೆದು ಆರ್ಥಿಕ ಸಬಲತೆ ಕಾಣಬೇಕು. ಹೆಚ್ಚು ಉದ್ಯೋಗಾವಕಾಶ ಸೃಷ್ಟಿಸುವಂತೆ ಸ್ವಯಂ ಉದ್ಯೋಗ ಕೈಗೊಳ್ಳಲು ಉತ್ಪಾದನಾ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದರು.

ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಹಾಗೂ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಇವರ ಸಹಯೋಗದಲ್ಲಿ ಗುರುವಾರ (ಡಿ.07) ನಡೆದ ಮಹಿಳಾ ಸ್ವ-ಸಹಾಯ ಉತ್ಪನ್ನಗಳ ವಸ್ತು ಪ್ರದರ್ಶನ ಮತ್ತು ಮಾರಾಟ ಮೇಳದ (ಅಸ್ಮಿತೆ) ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ವ-ಸಹಾಯ ಸಂಘಗಳ ಉತ್ಪನ್ನಗಳ ಮಾರಾಟಕ್ಕೆ ಮಾರುಕಟ್ಟೆ ಅವಶ್ಯವಿದ್ದು, ಈ ನಿಟ್ಟಿನಲ್ಲಿ ಮಾರಾಟ ಮೇಳ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ.

ಸುಮಾರು ಒಂದು ವಾರ ಈ ಮಾರಾಟ ಮೇಳ ನಡೆಯಲಿದೆ. ಮಹಿಳಾ ಸ್ವ-ಸಹಾಯ ಸಂಘಗಳು ವಸ್ತುಗಳಿಗೆ ಮಾರುಕಟ್ಟೆ ನೀಡುವ ಉದ್ದೇಶ ಇದಾಗಿದೆ.

ತಯಾರಿತ ಉತ್ಪನ್ನಗಳಿಗೆ ನ್ಯಾಯಯುತ ಬೆಲೆ ಸಿಗಬೇಕು ಎಂದು ತಿಳಿಸಿದರು.

**ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸಿ ಬೇಡಿಕೆ ಹೆಚ್ಚಿಸಿ:**

ಮಾರುಕಟ್ಟೆ ಜೊತೆಗೆ ಗ್ರಾಹಕರ ಕೊರತೆಯನ್ನು ನೀಗಿಸುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ.

ಈಗಾಗಲೇ ವಿವಿಧ ಉತ್ಪನ್ನಗಳ ಮಾರಾಟಕ್ಕಾಗಿ ಮಾರುಕಟ್ಟೆಯಲ್ಲಿ ಪೈಪೋಟಿ ಹೆಚ್ಚಿದೆ ಅದಕ್ಕೆ ಪೂರಕವಾಗಿ ಸ್ವ-ಸಹಾಯ ಸಂಘಗಳು ಉತ್ತಮ ಗುಣಮಟ್ಟದ ಉತ್ಪನ್ನಗಳನ್ನು ತಯಾರಿಸುವ ಮೂಲಕ ಬೇಡಿಕೆ ಹೆಚ್ಚಿಸಬೇಕು ಎಂದು ಸಲಹೆ ನೀಡಿದರು.

ನಗರ ಪ್ರದೇಶಗಳಲ್ಲಿ ಸುಮಾರು 3 ಲಕ್ಷಕ್ಕೂ ಅಧಿಕ ಸ್ವ ಸಹಾಯ ಸಂಘಗಳು ಇವೆ.

ಅವರಿಗೆ ಆರ್ಥಿಕ ನೆರವು ನೀಡುವ ಉದ್ದೇಶದಿಂದ 131 ಕೋಟಿ ರೂಪಾಯಿ ವ್ಯಯ ಮಾಡುವುದರ ಮೂಲಕ ಸಹಾಯ ಮಾಡಲಾಗಿದೆ.

ಕಳೆದ ವರ್ಷ ಆಯೋಜನೆ ಮಾಡಿದ ಮಾರಾಟ ಮೇಳದಲ್ಲಿ 3 ಕೋಟಿ ರೂಪಾಯಿ ಲಾಭ ಬಂದಿದೆ.




**ಮಹಿಳೆಯರು ದೇಶ ಆರ್ಥಿಕ ಬಲ:**

ಮಹಿಳೆಯರು ಮನೆಗಳಿಗೆ ಮಾತ್ರ ಸೀಮಿತವಾಗಬಾರದು ದೇಶದ ಆರ್ಥಿಕ ಬಲ ಹೆಚ್ಚಿಸಲು ಮಹಿಳೆಯರ ಪಾತ್ರ ಬಹಳಷ್ಟಿದೆ ಅದಕ್ಕಾಗಿ ರಾಜ್ಯದ ಮಹಿಳೆಯರಿಗೆ ಬಸ್ ನಲ್ಲಿ ಉಚಿತ ಪ್ರಯಾಣಕ್ಕೆ ಅವಕಾಶ ನೀಡಲಾಗಿದೆ.

1 ಕೋಟಿ 17 ಲಕ್ಷ ನೋಂದಾಯಿತ (ಮನೆ ಯಜಮಾನಿಯರಿಗೆ) ಮಹಿಳೆಯರ ಬ್ಯಾಂಕ್ ಖಾತೆಗೆ ನೇರವಾಗಿ ಪ್ರತಿ ತಿಂಗಳು 2 ಸಾವಿರ ಹಣ ವರ್ಗಾವಣೆ ಮಾಡಲಾಗುತ್ತಿದೆ.

ಸರ್ಕಾರ ಅನೇಕ ಅಭಿವೃದ್ಧಿ ಯೋಜನೆಗಳನ್ನು ಜಾರಿ ತರುವ ಮೂಲಕ ರಾಜ್ಯದ ಮಹಿಳೆಯರ ಸಬಲೀಕರಣಕ್ಕೆ ಶ್ರಮಿಸುತ್ತಿದೆ ಎಂದರು.



**ಸ್ವ ಸಹಾಯ ಸಂಘಗಳಿಗೆ ಚೆಕ್ ವಿತರಣೆ:**
ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಂಜೀವಿನಿ ಯೋಜನೆಯಡಿ ವಿವಿಧ ಜಿಲ್ಲೆಯಿಂದ ಆಗಮಿಸಿದ ಮಹಿಳಾ ಸ್ವ-ಸಹಾಯ ಸಂಘಗಳಿಗೆ ಉದ್ದಿಮೆ ಬಂಡವಾಳಕ್ಕಾಗಿ ಚೆಕ್ ವಿತರಣೆ ಮಾಡಿದರು.

ಅದೇ ರೀತಿಯಲ್ಲಿ 200 ಯೂನಿಟ್ ವರೆಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ.

ಒಬ್ಬ ಸದಸ್ಯರಿಗೆ ಒಟ್ಟು 10 ಕೆಜಿ ಅಕ್ಕಿ ವಿತರಣೆ ಲೆಕ್ಕದಲ್ಲಿ ಪ್ರತಿ ಕೆಜಿಗೆ 170 ರೂಪಾಯಿ ಹಾಗೂ 5 ಕೆಜಿ ಅಕ್ಕಿ ನೀಡಲಾಗುತ್ತಿದೆ ಅದರಂತೆ ಇನ್ನೊಂದು ಜನಪರ ಸರ್ಕಾರದ ಯೋಜನೆ ಯುವ ನಿಧಿ ಮೂಲಕ ಪದವೀಧರರಿಗೆ ಆರ್ಥಿಕ ನೆರವು ಸಹ ನೀಡುವುದು ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಸಿಂ ಸಿದ್ದರಾಮಯ್ಯ ಅವರು ಹೇಳಿದರು.

ವೈದ್ಯಕೀಯ ಉನ್ನತ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಚಿವ ಶರಣ್ ಪ್ರಕಾಶ ಪಾಟೀಲ, ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯಲ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಡಾ. ಶಾಲಿನಿ ರಜನೀಶ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಹರ್ಷಲ್ ಭೋಯಾರ್, ಕರ್ನಾಟಕ ರಾಜ್ಯ ಜೀವನೋಪಾಯ ಅಭಿಯಾನ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ನಿರ್ದೇಶಕಿ ಪಿ.ಐ ವಿದ್ಯಾ, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು ಹಾಗೂ ಜಿಲ್ಲೆಯಿಂದ ವಿವಿಧ ಸ್ವ ಸಹಾಯ ಸಂಘಗಳ ಮಹಿಳಾ ಸದಸ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

## ಕೆ.ಎಂ.ಇ.ಆರ್‌ಸಿ ಅನುದಾನದಲ್ಲಿ ಕ್ಯಾನ್ಸರ್ ಆಸ್ಪತ್ರೆ ಸ್ಥಾಪನೆಗೆ ಪ್ರಸ್ತಾವನೆ: ಸಚಿವ ಡಾ. ಶರಣಪ್ರಕಾಶ್ ಪಾಟೀಲ್

ಬೆಳಗಾವಿ ಸುವರ್ಣವಿಧಾನಸೌಧ: ಕೆ.ಎಂ.ಇ.ಆರ್ಸಿ ಅಡಿ ರೂ.300 ಕೋಟಿಗಳನ್ನು ಬಳ್ಳಾರಿಯಲ್ಲಿ ಕ್ಯಾನ್ಸ್ರ ಆಸ್ಪತ್ರೆ ಸ್ಥಾಪನೆಗೆ ಮೀಸಲಿರಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಸರ್ಕಾರದಿಂದ ಮುಂದಿನ ಆಯವ್ಯಯದಲ್ಲಿ ಕ್ಯಾನ್ಸರ್ ಆಸ್ಪತ್ರೆ ಸ್ಥಾಪನೆಗೆ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ.ಶರಣಪ್ರಕಾಶ್ ಆರ್ ಪಾಟೀಲ್ ಹೇಳಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿ ಗುರುವಾರ ವಿಧಾನಸಭಾ ಅಧಿವೇಶನದ ಪ್ರಶ್ನೋತ್ತರ ಕಲಾಪದಲ್ಲಿ ಕಂಪ್ಲಿ ಶಾಸಕ ಗಣೇಶ್.ಜೆ.ಎನ್. ಅವರ ಚುಕ್ಕೇ ಗುರುತಿನ ಪ್ರಶ್ನೆಗೆ ಉತ್ತರಿಸಿ ಅವರು ಮಾತನಾಡಿದರು.

ಬಳ್ಳಾರಿ ಸುತ್ತಮುತ್ತ 300 ಕಿ.ಮೀ ವ್ಯಾಪ್ತಿಯಲ್ಲಿ ಯಾವುದೇ ಕ್ಯಾನ್ಸ್ರ ಆಸ್ಪತ್ರೆಯಿಲ್ಲ. ಅಗತ್ಯವಾಗಿ ಬಳ್ಳಾರಿಯಲ್ಲಿ ಕ್ಯಾನ್ಸರ್ ಆಸ್ಪತ್ರೆ ತೆರೆಯಬೇಕಿದೆ. ಸದ್ಯ ವಿಜಯನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ದಾಖಲೆಗಳ ಪ್ರಕಾರ 2020ರಲ್ಲಿ 3783, 2021 ರಲ್ಲಿ 3859 ಹಾಗೂ 2022ರಲ್ಲಿ 3951 ಕ್ಯಾನ್ಸರ್ ರೋಗಿಗಳು ವಾರ್ಷಿಕವಾಗಿ ದಾಖಲಾಗುತ್ತಿದಾರೆ.

ಇಲ್ಲಿ ಕ್ಯಾನ್ಸರ್ ಖಾಯಿಲೆಗೆ ಚಿಕತ್ಸೆ ನೀಡಲಾಗುತ್ತಿದೆ. ವಿಕಿರಣ ಉಪಕರಣ ಹಾಗೂ ಕ್ಯಾನ್ಸರ್ ಶಸ್ತ್ರ ಚಿಕಿತ್ಸೆಗೆ ಸಂಬಂಧಪಟ್ಟಂತೆ ನುರಿತ ತಜ್ಞ ವೈದ್ಯರು ಕಾರ್ಯನಿರ್ವಹಿಸುತ್ತಿದಾರೆ. ವಿಮ್ಸ್ನ ರೆಡಿಯೋಥೆರಪಿ ವಿಭಾಗದಲ್ಲಿ ಕೋಬಾಲ್ಟ್, ಬ್ರೇಕಿ, ಕೀಮೋ,ಇನ್‌ಫ್ಯೂಜನ್ ತೆರಪಿಗಳು ಹಾಗೂ ರೇಡಿಯೇಷನ್ ಚಿಕಿತ್ಸೆಗಳನ್ನು ನೀಡಲಾಗುತ್ತಿದೆ. ಹೆಚ್ಚಿನ ಚಿಕಿತ್ಸೆ ಅಗತ್ಯವಿರುವ ರೋಗಿಗಳನ್ನು ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಗೆ ಶಿಫಾರಸ್ಸು ಮಾಡಲಾಗುತ್ತಿದೆ ಎಂದರು.



37 ಮೈನಿಂಗ್, 38 ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಬಳ್ಳಾರಿ ಜಿಲ್ಲೆಯಲ್ಲಿವೆ. ಇವುಗಳ ಮಾಲಿನ್ಯದಿಂದ ಸ್ಥಳೀಯ ಜನರಲ್ಲಿ ಕ್ಯಾನ್ಸರ್ ಹೆಚ್ಚಾಗುತ್ತಿದೆ. ಬಡ ಜನರು ದೂರದ ಬೆಂಗಳೂರಿಗೆ ತೆರಳಿ ಚಿಕಿತ್ಸೆ ಪಡೆಯುವುದು ದುಸ್ತರವಾಗಿದೆ. ದಯಮಾಡಿ ಜಿಲ್ಲೆಯಲ್ಲಿ ಕೆ.ಎಂ.ಇ.ಆರ್ಸಿ ಅನುದಾನದಲ್ಲಿ ಕಿದ್ವಾಯಿ ಮಾದರಿಯಲ್ಲಿ ಕ್ಯಾನ್ಸರ್ ಚಿಕಿತ್ಸೆಗೆ ಪ್ರತ್ಯೇಕ ಆಸ್ಪತ್ರೆ ನಿರ್ಮಿಸುವಂತೆ ಸಚಿವರಲ್ಲಿ ಶಾಸಕ ಗಣೇಶ್.ಜೆ.ಎನ್.ಕೋರಿದರು.

## ಅಂತಾರಾಷ್ಟ್ರೀಯ ಮಟ್ಟದ "ಜಿಲ್ಲಾ ಕ್ರೀಡಾಂಗಣ" ನಿರ್ಮಾಣಕ್ಕೆ ಕ್ರಮ

### ಯೋಜನೆ ರೂಪಿಸಲು ಅಧಿಕಾರಿಗಳಿಗೆ ಸೂಚನೆ: ಸಚಿವ ಬಿ.ನಾಗೇಂದ್ರ

ಬೆಳಗಾವಿ: ಜಿಲ್ಲೆಯಲ್ಲಿ ಅತಿ ಹೆಚ್ಚು ವಿಸ್ತೀರ್ಣದ ಜಿಲ್ಲಾ ಕ್ರೀಡಾಂಗಣ ನಿರ್ಮಾಣಕ್ಕಾಗಿ ಸಾರ್ವಜನಿಕರಿಂದ ಬೇಡಿಕೆ ಇದೆ. ಕ್ರೀಡಾ ಪಟುಗಳು ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶದ ಹೆಸರು ಪ್ರತಿನಿಧಿಸುತ್ತಾರೆ. ಆದ್ದರಿಂದ ಕ್ರೀಡಾ ಪಟುಗಳಿಗೆ ಅನುಕೂಲವಾಗುವಂತೆ ನೂತನ ಜಿಲ್ಲಾ ಕ್ರೀಡಾಂಗಣ ನಿರ್ಮಾಣಕ್ಕೆ ಯೋಜನೆ ರೂಪಿಸಬೇಕು ಎಂದು ಯುವ ಸಬಲೀಕರಣ, ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸಚಿವ ಬಿ.ನಾಗೇಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಬೆಳಗಾವಿಯ ರಾಮತೀರ್ಥ ನಗರದಲ್ಲಿ (ಕೆ.ಇ.ಬಿ.) ಗ್ರಿಡ್ ಹತ್ತಿರ ಗುರುವಾರ (ಡಿ.07) ನೂತನ "ಜಿಲ್ಲಾ ಕ್ರೀಡಾಂಗಣ" ನಿರ್ಮಿಸಲು ಪ್ರಸ್ತಾಪಿಸಿರುವ ಜಾಗೆಯನ್ನು ಪರಿವೀಕ್ಷಿಸಿ, ಅವರು ಮಾತನಾಡಿದರು.



ಜಿಲ್ಲಾಡಳಿತ ಹಾಗೂ ಸಂಬಂಧಿಸಿದ ಇಲಾಖೆಯಿಂದ ಕ್ರೀಡಾಂಗಣ ನಿರ್ಮಾಣಕ್ಕೆ ಈಗ ಗುರುತಿಸಿರುವ ಸ್ಥಳ ಸೂಕ್ತವಾಗಿದೆ. ನಿರ್ಮಾಣಕ್ಕೆ ಅಗತ್ಯವಿರುವ ಯೋಜನೆ ರೂಪಿಸಿ, ಜಿಲ್ಲಾ ಉಸ್ತುವಾರಿ ಸಚಿವರ ಜೊತೆ ಚರ್ಚಿಸಿದ ಬಳಿಕ ಕ್ರೀಡಾಂಗಣ ನಿರ್ಮಾಣಕ್ಕೆ ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಅತಿ ಹೆಚ್ಚು ಕ್ರೀಡಾ ಪಟುಗಳಿದ್ದಾರೆ. ಈ ಕ್ರೀಡಾಂಗಣ ನಿರ್ಮಾಣದಿಂದ ಯುವ ಕ್ರೀಡಾ ಪಟುಗಳಿಗೆ ಬಹಳಷ್ಟು ಅನುಕೂಲವಾಗಲಿದೆ.

ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಈಗಾಗಲೇ ಕ್ರೀಡಾಂಗಣ ನಿರ್ಮಾಣಕ್ಕೆ 9 ಎಕರೆ 20 ಗುಂಟೆ ಸ್ಥಳ ನೀಡಿದ್ದಾರೆ. ಸದರಿ ಸರ್ವೇ ನಂಬರ್ ಒಳಪಡುವ ಇನ್ನೂ 6 ಎಕರೆ ಜಾಗೆಯಲ್ಲಿ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಲು ಸ್ಥಳ ಗುರುತಿಸಬೇಕು ಎಂದು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ಸಚಿವ ಬಿ.ನಾಗೇಂದ್ರ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕ ಬಿ. ಶ್ರೀನಿವಾಸ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ, ಹಾಗೂ ಮತ್ತಿತರ ಅಧಿಕಾರಿಗಳು ಹಾಜರಿದ್ದರು.

## ಪ್ರತಿಭಟನೆ ನಿರತ ಕಬ್ಬು ಬೆಳೆಗಾರರನ್ನು ಭೇಟಿಯಾದ ಕೃಷಿ ಸಚಿವ ಚಲುವರಾಯಸ್ವಾಮಿ ಸಮಸ್ಯೆಗಳನ್ನು ಈಡೇರಿಸುವ ಭರವಸೆ

ಬೆಳಗಾವಿ: ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಹಾಗೂ ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ್ ಗುರುವಾರ ಬೆಳೆಗಾವಿ ಸುವರ್ಣಸೌಧದ ಬಳಿ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟನೆ ನಡೆಸುತ್ತಿರುವ ರೈತರನ್ನು ಭೇಟಿ ಮಾಡಿ ಅಹವಾಲು ಆಲಿಸಿದರು.



ಇದೇ ವೇಳೆ ರೈತರನ್ನು ಉದ್ದೇಶಿಸಿ ಮಾತನಾಡಿದ ಸಚಿವ ಚಲುವರಾಯಸ್ವಾಮಿ ಅವರು ಸರ್ಕಾರಕ್ಕೆ ರೈತರ ಬಗ್ಗೆ ವಿಶೇಷ ಕಾಳಜಿ ಇದೆ. ರೈತರ ಪರ ಕೆಲಸವನ್ನು ಸರ್ಕಾರ ಮಾಡುತ್ತಿದೆ. ರೂ.38,000 ಕೋಟಿ ಸದ್ಯ ಸರಕಾರಕ್ಕೆ ಹೊರೆಯಾಗಿದೆ, ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹಂತ ಹಂತವಾಗಿ ಕೃಷಿ ಇಲಾಖೆಯ ಖಾಲಿ ಇರುವ ಎಲ್ಲಾ ಹುದ್ದೆಗಳನ್ನ ತುಂಬುಲು ಸಮ್ಮತಿ ನೀಡಿದ್ದಾರೆ.ನಮ್ಮ ಸರ್ಕಾರದಲ್ಲಿ ರೈತರ ಎಲ್ಲಾ ಸಮಸ್ಯೆಗಳನ್ನು ಇಡೇರಿಸಲಾಗುವುದು ಎಂದು ಭರವಸೆ ನೀಡಿದರು.

ಕಬ್ಬು ಬೆಳೆಗಾರರ ಸಮಸ್ಯೆಗಳನ್ನು ಚರ್ಚಿಸಲು ಸೋಮವಾರ ಸುವರ್ಣ ಸೌಧದಲ್ಲಿ ಸಭೆ ಕರೆಯುತ್ತೆನೆ. ಈ ಸಭೆಗೆ ಶಾಸಕ ದರ್ಶನ್ ಪುಟ್ಟಣಯ್ಯ ಹಾಗೂ ಕೆಲವು ರೈತ ಪ್ರತಿನಿಧಿಗಳಿಗೂ ಆಹ್ವಾನಿಸುತ್ತೇನೆ. ರೈತರಿಗೆ ಬರ ಪರಿಹಾರದ ಮೊದಲನೆಯ ಕಂತು 2000 ಹಣವನ್ನ ರೈತರಿಗೆ ಬಿಡುಗಡೆ ಮಾಡಲಾಗುತ್ತಿದೆ.

ನಾನು ಕೂಡಾ ಒಬ್ಬ ರೈತ. ಹಾಗಾಗಿ ರೈತರ ಪರವಾಗಿ ಮುಖ್ಯಮಂತ್ರಿಗಳ ಮನವೊಲಿಸಿ ಬೇಡಿಕೆ ಇಡೇರಿಸುತ್ತೇನೆ ಸಚಿವ ಎನ್ ಚಲುವರಾಯಸ್ವಾಮಿ ರೈತರಿಗೆ ಭರವಸೆ ನೀಡಿದರು.

## ಅಧಿವೇಶನ ವೀಕ್ಷಣೆಗೆ ಆಗಮಿಸಿದ ಮಕ್ಕಳ ಮನರಂಜನೆಗೆ ಸುವರ್ಣ ವಿಧಾನಸೌಧದಲ್ಲೊಂದು ರಾಕ್ ಕ್ಲೆಂಬಿಂಗ್



ಬೆಳಗಾವಿ: ವರ್ಷಕ್ಕೊಮ್ಮೆ ಬೆಳಗಾವಿಯಲ್ಲಿ ನಡೆಯುವ ಚಳಿಗಾಲದ ಅಧಿವೇಶನವನ್ನು ನೋಡಲು ಆಗಮಿಸುವ ಮಕ್ಕಳಿಗೆ ತಿಳುವಳಿಕೆ ಜೊತೆಗೆ ಮನರಂಜನೆಯನ್ನು ನೀಡುವ ಉದ್ದೇಶದಿಂದ ಸುವರ್ಣ ವಿಧಾನಸೌಧದ ಆವರಣದಲ್ಲಿ ರಾಕ್ ಕ್ಲೆಂಬಿಂಗ್ ತಾತ್ಕಲಿಕವಾಗಿ ನಿರ್ಮಿಸಲಾಗಿದೆ ಎಂದು ವಿಧಾನಸಭೆಯ ಸಭಾಧ್ಯಕ್ಷ ಯು ಟಿ ಖಾದರ್ ಅವರು ತಿಳಿಸಿದರು.

ಇಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆವತಿಯಿಂದ ಬೆಳಗಾವಿಯ ಸುವರ್ಣ ವಿಧಾನಸೌಧದ ಆವರಣದಲ್ಲಿ ಮಕ್ಕಳಿಗಾಗಿ ನಿರ್ಮಿಸಲಾಗಿರುವ ರಾಕ್ ಕ್ಲೆಂಬಿಂಗ್ ಚಟುವಟಿಕೆಗೆ ಚಾಲನೆ ನೀಡಿ ಮಾತನಾಡಿದ ಅವರು ಬೆಳಗಾವಿ ಸುತ್ತಮುತ್ತಲಿನ ಅನೇಕ ಶಾಲಾ ಮಕ್ಕಳು ಕಲಾಪವನ್ನು ನೋಡಲು ಉತ್ಸುಕರಾಗಿದ್ದಾರೆ. ಅವರನ್ನು ಹೊರಗಡೆ ಕಾಯಿಸುವ ಬದಲು ಇಂತಹ ಚಟುವಟಿಕೆಗಳನ್ನು ಆರಂಭಿಸಲಾಗಿದೆ ಎಂದರು.

ಈ ವಯಸ್ಸಿನಲ್ಲಿ ಮಕ್ಕಳು ಅಧಿವೇಶನದಂತಹ ಮುಖ್ಯ ಸಂಗತಿಗಳನ್ನು ನೋಡಿದಾಗ ಅದು ಅವರಿಗೆ ಕೊನೆಯವರೆಗೂ ನೆನಪಿರುವಂತಹ ಸಂಗತಿಯಾಗಿ ಮನಸ್ಸಿನಲ್ಲಿ ಉಳಿಯುತ್ತದೆ. ಅಧಿವೇಶನ ನೋಡಲು ಆಗಮಿಸುವ ಮಕ್ಕಳಿಗಾಗಿ ಕುಡಿಯುವ ನೀರು, ಸಿಹಿ ಪಾನೀಯ ಸೇರಿದಂತೆ ಮಕ್ಕಳಿಂದ ಮಕ್ಕಳಿಗಾಗಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಹ ಹಮ್ಮಿಕೊಳ್ಳಲಾಗಿದೆ. "ಇಂದಿನ ಮಕ್ಕಳು ಮುಂದಿನ ಪ್ರಜೆಗಳು" ಅವರು ಬೆಳಗಾವಿ ಅಧಿವೇಶನ ನೋಡಿದ್ದು ನೆನಪುಳಿಯುವಂತೆ ಮಾಡುವುದು ನಮ್ಮ ಮುಖ್ಯ ಉದ್ದೇಶ ಎಂದು ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಬಿ ನಾಗೇಂದ್ರ ಅವರು ಮಾತನಾಡಿ ರಾಜ್ಯದಲ್ಲಿ ಕ್ರೀಡೆಗೆ ಅತ್ಯಂತ ಹೆಚ್ಚಿನ ಪ್ರೋತ್ಸಾಹ ನೀಡಲಾಗುತ್ತಿದೆ, ರಾಕ್ ಕ್ಲೆಂಬಿಂಗ್ ಕ್ರೀಡೆಯನ್ನು ಓಲಂಪಿಕ್ಸ್‌ನಲ್ಲಿ ಸಹ ಆಡಿಸಲಾಗುತ್ತಿದೆ. ಮಕ್ಕಳಿಗೆ ಈ ಕುರಿತು ಆಸಕ್ತಿ ಬೆಳೆಸಲು ಈ ರೀತಿಯ ಕ್ರೀಡೆಯನ್ನು ಹಮ್ಮಿಕೊಳ್ಳಲಾಗುತ್ತಿದೆ. ಓಲಂಪಿಕ್‌ನಲ್ಲಿ ಚಿನ್ನ ಗೆದ್ದವರಿಗೆ 5 ಕೋಟಿ ರೂ. ಬಹುಮಾನ ಘೋಷಿಸಿರುವ ಏಕೈಕ ರಾಜ್ಯ ನಮ್ಮ ಕರ್ನಾಟಕ ಎಂದರು.

ಕಾರ್ಯಕ್ರಮದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ, ಲೋಕೋಪಯೋಗಿ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಸೇರಿದಂತೆ ಅಧಿವೇಶನ ನೋಡಲು ಆಗಮಿಸಿದ್ದ ಶಾಲಾ ಮಕ್ಕಳು ಹಾಗೂ ಶಿಕ್ಷಕರು ಉಪಸ್ಥಿತರಿದ್ದರು.

## ಬಹಿರಂಗ ಹರಾಜು

ಧಾರವಾಡ: ಅಳ್ನಾವರ ಪೊಲೀಸ್ ಠಾಣೆಯ ಆವರಣದಲ್ಲಿರುವ ಅಪಘಾತ ಪ್ರಕರಣಗಳಲ್ಲಿ ಜಪ್ತಪಡಿಸಿಕೊಂಡಿರುವ ಒಂದು ಮೋಟಾರ ಸೈಕಲ್ (ಜಖಂಗೊಂಡಿದ್ದು) ಒಂದು ಫೋರ್ಡ್ ಕಂಪನಿಯ ಕಾರ್ (ಜಖಂಗೊಂಡಿದ್ದು) ಇವುಗಳನ್ನು ಇದ್ದ ಸ್ಥಿತಿಯಲ್ಲಿಯೇ (ಬಿಡಿಭಾಗಳಾಗಿ ಮಾಡಿ) ನ್ಯಾಯಾಲಯದ ಆದೇಶದಂತೆ ಡಿಸೆಂಬರ್ 13 ರಂದು ಬೆಳಿಗ್ಗೆ 11 ಗಂಟೆಗೆ ಅಳ್ನಾವರ ಪೊಲೀಸ್ ಠಾಣೆಯಲ್ಲಿ ಬಹಿರಂಗ ಹರಾಜಿನ ಮೂಲಕ ವಿಲೇವಾರಿ ಮಾಡಲಾಗುವುದು. ಆಸಕ್ತರು ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಅಳ್ನಾವರ ಪೊಲೀಸ್ ಠಾಣೆಯ ಪೊಲೀಸ್ ಸಬ್‌ಇನ್ಸ್ಪಕ್ಟರ್ ಮೊ.ಸಂ:9480804346 ಸಂಪರ್ಕಿಸಬಹುದೆಂದು ಅಳ್ನಾವರ ಪೊಲೀಸ್ ಠಾಣೆಯ ಪಿಎಸ್‌ಐ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಪಟ್ಟಣ ಪಂಚಾಯತ ಕಾರ್ಯಾಲಯ ಮಚ್ಛೆ**
**Town Panchayat Machhe**
Tal:BELAGAVI dist:belagavi
ಕ್ರಸಂಪಪಂಮ/ತಾಂಶಾ/15th Fin//SBM2.0& TPFTender/2023-24/59 ದಿನಾಂಕ:06-12-2023

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಮಚ್ಛೆ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಸನ್ 2023-24ನೇ ಸಾಲಿನ 15ನೇ ಹಣಕಾಸು ಆಯೋಗದ ಅನುದಾನ, ಎಸ್.ಬಿ.ಎಂ.2.0 ಮತ್ತು ಎಸ್.ಎಫ್.ಸಿ ಕುಡಿಯುವ ನೀರಿನ ಅನುದಾನ, ಮತ್ತು ಪಟ್ಟಣ ಪಂಚಾಯತಿ ಅನುದಾನದಲ್ಲಿ ಕಾಮಗಾರಿಗಳನ್ನು/ಸಾಮಗ್ರಿಗಳನ್ನು ಕೈಗೆತ್ತಿಕೊಳ್ಳುವುದು/ಪೂರೈಸುವ ಕುರಿತು ಅರ್ಹ ನೊಂದಾಯಿಸಲ್ಪಟ್ಟ ಗುತ್ತಿಗೆದಾರರಿಂದ/ಪೂರೈಕೆದಾರರಿಂದ ಟೆಂಡರ್ ಅಹ್ವಾನಿಸಲಾಗಿದೆ. ಹೆಚ್ಚಿನ ವಿವರಗಳನ್ನು https://kppp.karnataka.gov.in ದಲ್ಲಿ ನೋಡಬಹುದು. ಟೆಂಡರ್‌ಗಳನ್ನು ಸಲ್ಲಿಸುವ ಕೊನೆಯ ದಿನಾಂಕ: 16-12-2023 ರಂದು 17:30 ಗಂಟೆಯವರೆಗೆ ಇರುತ್ತದೆ. ಹೆಚ್ಚಿನ ವಿವರಗಳಿಗೆ ಕಛೇರಿಯ ಕಿರಿಯ ಅಭಿಯಂತರರನ್ನು ಸಂಪರ್ಕಿಸಬಹುದಾಗಿದೆ.

ಸಹಿ/-ಕೆ. ಆಯ್. ನಾಗನೂರ
ಮುಖ್ಯಾಧಿಕಾರಿ
ಪಟ್ಟಣ ಪಂಚಾಯತ, ಮಚ್ಛೆ

ಸಹಿ/-ಬಸವರಾಜ ನಾಗರಾಳ ಕೆ.ಎ.ಎಸ್.
ಆಡಳಿತಾಧಿಕಾರಿ ಪಟ್ಟಣ ಪಂಚಾಯತಿ,
ಮಚ್ಛೆ ಹಾಗೂ ತಹಶೀಲ್ದಾರ ಬೆಳಗಾವಿ.

DIPR/BGM/RO-NO-722/KSMCA/2023-24

## ಹಳೆಯ ಪಿಂಚಣಿ ಯೋಜನೆ ಓಪಿಎಸ್ ಜಾರಿಗೆ ಭಾಗಶಃ ಪ್ರಯತ್ನ: ಕೃಷ್ಣ ಭೈರೇಗೌಡ

ಬೆಳಗಾವಿ ಸುವರ್ಣ ವಿಧಾನಸೌಧ: ಹಳೆಯ ಪಿಂಚಣಿ ಯೋಜನೆ (ಓಪಿಎಸ್) ಜಾರಿಗೆ ಸರ್ಕಾರ ಬದ್ಧವಾಗಿದೆ. ಮುಖ್ಯಮಂತ್ರಿಗಳು ಡಿಸೆಂಬರ್ 6ರಂದು ಸೂಚನೆ ನೀಡಿದ್ದು, ಈ ಸಂಬಂಧ ರಚಿಸಲಾಗಿರುವ ಸಮಿತಿಯನ್ನು 10 ದಿನಗಳೊಳಗೆ ಪುರ್ನರಚಿಸಿ ಆದೇಶಿಸಲಾಗುವುದು ಎಂದು ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ ಅವರು ಹೇಳಿದರು.

ವಿಧಾನ ಪರಿಷತ್‌ನಲ್ಲಿ ಸದಸ್ಯರಾದ ಎಸ್.ವಿ.ಸಂಕನೂರ ಅವರು ಎತ್ತಿಗೆ ಪ್ರಶ್ನೆಗೆ ಪ್ರತಿಕ್ರಿಯಿಸಿದ ಸಚಿವರು, ಬೇರೆ ಬೇರೆ ರಾಜ್ಯಗಳಿಗೆ ಭೇಟಿ ನೀಡಿ ಈ ಬಗ್ಗೆ ಅಧ್ಯಯನ ನಡೆಸಲು ಮತ್ತು ಕೇಂದ್ರ ಸರ್ಕಾರದ ಅಧಿಕಾರಿಗಳೊಂದಿಗೆ ಚರ್ಚಿಸಲು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ ಎಂದು ತಿಳಿಸಿದರು.

ಚುನಾವಣೆಯ ಪ್ರಣಾಳಿಕೆಯಲ್ಲಿ ಓಪಿಎಸ್ ಜಾರಿ ಮಾಡುವುದಾಗಿ ನೌಕರರಿಗೆ ತಿಳಿಸಿದ್ದು ಮಾತಿಗೆ ತಕ್ಕಂತೆ ನಡೆಯಬೇಕು ಎಂದು ಸದಸ್ಯರಾದ ಕೋಟಾ ಶ್ರೀನಿವಾಸ ಪೂಜಾರಿ ಅವರು ಒತ್ತಾಯಿಸಿದರು.

ನೌಕರರು ನಿವೃತ್ತಿಯ ನಂತರ ನಿವೃತ್ತಿ ವೇತನ ಪಡೆಯುವುದು ಅವರಿಗೆ ಸಂವಿಧಾನ ಬದ್ಧವಾಗಿ ನೀಡಿದ ಹಕ್ಕಾಗಿದೆ. ಹೊಸ ಪಿಂಚಣಿ ಯೋಜನೆ ಎನ್‌ಪಿಎಸ್ ಜಾರಿಯಿಂದಾಗಿ ಸರ್ಕಾರಿ ನೌಕರಿ ಸಿಕ್ಕರು ನಿವೃತ್ತಿ ವೇಳೆ ಬರೀಗೈಲಿ ಹೋಗುವ ದುಸ್ಥಿತಿ ಬಂದೊದಗಿದೆ.

ನಿವೃತ್ತಿ ನಂತರ ಕುಟುಂಬಗಳು ಕಷ್ಟದ ಜೀವನ ನಡೆಸುವುದು ಯಾವ ನ್ಯಾಯ? ಎಂದು ಸದಸ್ಯರಾದ ಎಸ್.ವಿ.ಸಂಕನೂರ ಅವರು ಪ್ರಶ್ನಿಸಿದರು.



ಇದಕ್ಕೆ ದನಿಗೂಡಿಸಿದ ಸದಸ್ಯರಾದ ಹೇಮಲತಾ ನಾಯಕ ಅವರು ಮಾತನಾಡಿ, ಸರ್ಕಾರಿ ನೌಕರರಿಂದ ಸೇವೆ ಪಡೆದು ಬಳಿಕ ಕೈಬಿಡುವುದು ಸರಿಯಲ್ಲ. ಹತ್ತಾರು ವರ್ಷ ಸರ್ಕಾರಿ ಸೇವೆ ಮಾಡಿ ಜನ ಸೇವೆ ಮಾಡಿ ಬಳಿಕ ಮನೆಗೆ ಸುಮ್ಮನೆ ಹೋಗುವುದು ಸರಿಯಲ್ಲ. ನೌಕರರಿಗೆ ನಿವೃತ್ತಿ ವೇತನ ನೀಡುವ ಕಾರ್ಯ ಅತ್ಯಗತ್ಯವಾಗಿ ಆಗಬೇಕು ಎಂದು ತಿಳಿಸಿದರು.

ಓಪಿಎಸ್ ಜಾರಿಗೆ ಕಾಲಮಿತಿ ನಿಗದಿಪಡಿಸಬೇಕು. ಈ ಯೋಜನೆಯ ಜಾರಿ ಅನುಷ್ಠಾನ ಹಿನ್ನೆಲೆಯಲ್ಲಿ ಸಮಿತಿಗೆ ನೀಡಿರುವ ಕಾಲಾವಧಿ ಎಷ್ಟು ಎಂಬುದನ್ನು ಹಾಗೂ ಸಮಿತಿಯ ಕಾರ್ಯವ್ಯಾಪ್ತಿ ಏನು ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಸಂಕನೂರ ಅವರು ಪಟ್ಟುಹಿಡಿದರು.

ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕೆಲಸ ಮಾಡುವ ನೌಕರರಿಗು ಸಹ ಓಪಿಎಸ್ ಜಾರಿಯಾಗಬೇಕು ಎನ್ನುವ ವಿಷಯವು ಓಪಿಎಸ್ ಜಾರಿ ಸಂಬಂಧ ರಚಿಸಲಾಗಿರುವ ಸಮಿತಿಯ ಕಾರ್ಯವ್ಯಾಪ್ತಿಗೊಳಪಡಬೇಕು ಎಂದು ಸದಸ್ಯರಾದ ಮರಿತಿಬ್ಬೇಗೌಡ ಅವರು ಸಲಹೆ ಮಾಡಿದರು.

ಅನುದಾನಿತ ಸಂಸ್ಥೆಯಲ್ಲಿ ಕೆಲಸ ಮಾಡುವ ನೌಕರರು ಸಹ ನಿವೃತ್ತಿ ವೇತನದಿಂದ ವಂಚಿತರಾಗಬಾರದೆಂಬುದು ನಮ್ಮ ಕಾಳಜಿಯಾಗಿದೆ.

ಹೊಸ ಪಿಂಚಣಿ ಯೋಜನೆಯನ್ನು ರದ್ದುಗೊಳಿಸಿ ಹೊಸ ಪಿಂಚಣಿ ಯೋಜನೆಯನ್ನು ಜಾರಿ ಮಾಡಬೇಕು ಎನ್ನುವ ಮನವಿಯನ್ನು ಸರ್ಕಾರಿ ನೌಕರರ ಹಿತದೃಷ್ಟಿಯಿಂದ ಮರು ಪರಿಶೀಲಿಸುತ್ತಿದ್ದು, ನೌಕರರ ನಿರೀಕ್ಷೆಯಂತೆ ಯೋಜನೆಯ ಜಾರಿಗೆ ಭಾಗಶಃ ಪ್ರಯತ್ನವಾಗಿದೆ ಎಂದು ಕೃಷ್ಣ ಭೈರೇಗೌಡ ಅವರು ತಿಳಿಸಿದರು.

**ಸವದತ್ತಿ ಯಲ್ಲಮ್ಮಾ ಪುರಸಭೆ ಕಾರ್ಯಾಲಯ ಸವದತ್ತಿ-591126**
Website : www.saundattitown.mrc.gov.in E-Mail: itstaff_ulb_saundatti@yahoo.co.in and Ka.saundatti.tmc@gmail.com
ಜನಸ್ಪಂದನ ಕರೆ ಕೇಂದ್ರ ಸಂಖ್ಯೆ:1902, ಕಚೇರಿ ದೂರವಾಣಿ/ಫ್ಯಾಕ್ಸ ನಂ. 08330-222226 ಜಿಲ್ಲೆ:ಬೆಳಗಾವಿ. 08330-222226) ರಾಜ್ಯ:ಕರ್ನಾಟಕ
ಕ್ರ.ಸಂ.ಸಯಪು/ಎಸ.ಎಫ್.ಸಿ, ಶೇ 29% ಪೌ. ಅಲ್ಪೋಪಹಾರ/ಟೆಂಡರ/2023-24 ದಿನಾಂಕ:04/12/2023

**ಅಲ್ಪಾವಧಿ ಟೆಂಡರರ ಪ್ರಕಟಣೆ**

ಈ ಮೂಲಕ ಯಾವತ್ತೂ ಅರ್ಹ ಎನ್.ಈ.ಓ ಗಳಿಗೆ ಹಾಗೂ ಹೊಟೇಲ್ ಮಾಲಿಕರಿಗೆ ಈ ಪ್ರಕಟಣೆಯ ಮೂಲಕ ತಿಳಿಪಡಿಸುವುದೇನೆಂದರೆ, ಸನ್ 2023-24 ನೇ ಸಾಲಿನ ಶೇ 29% ರ ರಾಜ್ಯ ಹಣಕಾಸು ಯೋಜನೆಯಡಿ ಪೌರಕಾರ್ಮಿಕರಿಗೆ ಬೆಳಗಿನ ಉಪಹಾರ ನೀಡುವ ಸಲುವಾಗಿ ಅರ್ಹರಿಂದ "ಅಲ್ಪಾವಧಿ ಟೆಂಡರ" ಆಹ್ವಾನಿಸಲಾಗಿದೆ ಆಸಕ್ತಿಯುಳ್ಳವರು ದಿನಾಂಕ: 03-01-2024 ರಂದು ಮಧ್ಯಾಹ್ನ 4.00 ಗಂಟೆಯೊಳಗಾಗಿ ಕಾರ್ಯಾಲಯಕ್ಕೆ ಬೇಡಿಕೊಟ್ಟು ಸಂಬಂಧಪಟ್ಟ ವಿಷಯ ನಿರ್ವಹಕರಿಂದ ಟೆಂಡರ ಫಾರ್ಮನ್ನು ಪಡೆಯಬಹುದಾಗಿದೆ, ಟೆಂಡರ್ ಫಾರ್ಮನ್ನು ಭರ್ತಿ ಮಾಡಿ ಸಲ್ಲಿಸಲು ಕೊನೆಯ ದಿನಾಂಕ: 05-01-2024 ರಂದು ಸಾಯಂಕಾಲ 4.00 ಘಂಟೆ ಒಳಗಾಗಿ ಹಾಗೂ ಟೆಂಡರನ್ನು ತೆರೆಯುವ ದಿನಾಂಕ:05-01-2024 ಸಾಯಂಕಾಲ 5.00 ಗಂಟೆಯಾಗಿರುತ್ತದೆ ಹೆಚ್ಚಿನ ಮಾಹಿತಿಗಾಗಿ ಕಚೇರಿಯ ಮುಖ್ಯಾಸ್ಥರನ್ನು/ವಿಷಯ ನಿರ್ವಹಕರನ್ನು ಬೇಟಿ ಮಾಡಲು ತಿಳಿಸಪಡಿಸಿದೆ

ಸಹಿ/-ಆಡಳಿತಾಧಿಕಾರಿಗಳು
ಸವದತ್ತಿ ಯಲ್ಲಮ್ಮ ಪುರಸಭೆ ಸವದತ್ತಿ

ಸಹಿ/-ಮುಖ್ಯಾಧಿಕಾರಿಗಳು
ಸವದತ್ತಿ ಯಲ್ಲಮ್ಮ
ಪುರಸಭೆ ಸವದತ್ತಿ

DIPR/BGM/RO-NO-710/MCA/2023-24

## ಅರ್ಜಿ ಆಹ್ವಾನ

ಬೆಳಗಾವಿ: 2023-24ನೇ ಸಾಲಿನ ದೀನ್‌ದಯಾಳ್ ಅಂತ್ಯೋದಯ ಯೋಜನೆ- "ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ **(DAY-NULM)** ಯೋಜನೆಯಲ್ಲಿ ವಿವಿಧ ಘಟಕಗಳಡಿಯಲ್ಲಿ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಆಸಕ್ತರು ಡಿಸೆಂಬರ್ 08, 2023ರ ಒಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಈ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಅವಧಿ ಮೀರಿ ಬಂದಂತಹ ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಡೇ-ನಲ್ಮ್ ಶಾಖೆ, ಮಹಾನಗರ ಪಾಲಿಕೆ, ಬೆಳಗಾವಿ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಾನಗರ ಪಾಲಿಕೆ ಉಪ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಳಸಾ ಬಂಡೂರಿ ಮಹದಾಯಿ ಕಾಮಗಾರಿ ಪ್ರಾರಂಭಿಸುವಂತೆ ರೈತರ ಒತ್ತಾಯ

ಬೆಳಗಾವಿ: ಧಾರವಾಡ ಜಿಲ್ಲೆಗೆ ಬರ ಪರಿಹಾರ 212 ಕೋಟಿ ರೂ. ಬಿಡುಗಡೆ ಹಾಗೂ ಕಳಸಾ ಬಂಡೂರಿ ಮಹದಾಯಿ ಕಾಮಗಾರಿಯ ಪ್ರಾರಂಭಿಸುವಂತೆ ಒತ್ತಾಯಿಸಿ ರತ್ನ ಭಾರತ ರೈತ ಸಮಾಜ ನವ ದೆಹಲಿ ವತಿಯಿಂದ ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಗುರುವಾರ ಪ್ರತಿಭಟನೆ ನಡೆಸಲಾಯಿತು.



ಪ್ರತಿಭಟನೆಯಲ್ಲಿ ರತ್ನ ಭಾರತ ರೈತ ಸಮಾಜ ನವ ದೆಹಲಿ ಉಪಾಧ್ಯಕ್ಷ ಹೇಮನಗೌಡ ಸವನಗೌಡ ಮಾತನಾಡಿ, ರಾಜ್ಯದ ವಿವಿಧ ಜಿಲ್ಲೆಗಳನ್ನು ಬರಗಾಲ ಅಂತಾ ಘೋಷಣೆ ಮಾಡಿದ್ದು, ಧಾರವಾಡ ಜಿಲ್ಲೆಗೆ 212 ಕೋಟಿ ರೂಗಳ ಬರ ಪರಿಹಾರದ ಹಣ 1 ರೂಪಾಯಿ ಕೂಡಾ ಜಮಾ ಆಗಿರುವುದಿಲ್ಲ. ರಾಜ್ಯಾದ್ಯಾಂತ ಬರಗಾಲಕ್ಕೆ ತುತ್ತಾಗಿ ರೈತರು ಬೆಳೆಸಾಲ ಮಾಡಿ ತುಂಬಲಾಗದೆ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ.

ಈ ಕೂಡಲೇ ಧಾರವಾಡ ಜಿಲ್ಲೆಗೆ ಪರಿಹಾರದ ಹಣ 212 ಕೋಟಿಗಳನ್ನು ಬಿಡುಗಡೆ ಮಾಡಬೇಕು. ರೈತರು ತುಂಬಿದ ಬೆಳೆ ವಿಮೆ ಹಣವನ್ನು ಮಿಮಾ ಕಂಪನಿಯಿಂದ ಕೊಡಿಸಬೇಕು.

# ಸೇವಾ ಭದ್ರತೆ ನೀಡುವಂತೆ ಅತಿಥಿ ಉಪನ್ಯಾಸಕರ ಆಗ್ರಹ

## ಪ್ರತಿಭಟನಾ ಸ್ಥಳಕ್ಕೆ ಸಚಿವ ಎಂ.ಬಿ. ಪಾಟೀಲ್ ಭೇಟಿ

ಬೆಳಗಾವಿ: ಸೇವಾಭದ್ರತೆ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗಾಗಿ ರಾಜ್ಯ ಸರ್ಕಾರಿ ಪದವಿ ಕಾಲೇಜುಗಳ ಅತಿಥಿ ಉಪನ್ಯಾಸಕರು ಬೆಳಗಾವಿಯ ಸುವರ್ಣ ಸೌಧದ ಬಳಿ ನಡೆಸುತ್ತಿದ್ದ ಪ್ರತಿಭಟನಾ ಸ್ಥಳಕ್ಕೆ ಸಚಿವ ಎಂ.ಬಿ. ಪಾಟೀಲ್ ಭೇಟಿ ನೀಡಿ ಅಹವಾಲು ಸ್ವೀಕರಿಸಿದರು.

ಇದೇ ವೇಳೆ ಮಾತನಾಡಿ, ಅತಿಥಿ ಉಪನ್ಯಾಸಕರ ಸಮಸ್ಯೆ ಪರಿಹರಿಸುವ ದೃಷ್ಟಿಯಿಂದ ಸಾಧಕ, ಬಾಧಕಗಳ ಕುರಿತು ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ, ಸೂಕ್ತ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡುವ ಭರವಸೆ ನೀಡಿದರು.



ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್. ಕಲ್ಮನಿ ಮಾತನಾಡಿ, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಲ್ಲಿ ಬಹುತೇಕರು ನಿವೃತ್ತಿಯ ಅಂಚಿಗೆ ತಲುಪಿದ್ದಾರೆ. ಅತಿಥಿ ಉಪನ್ಯಾಸಕರಿಗೆ ಉತ್ತಮ ಜೀವನ ನಡೆಸುವಂತೆ ಅನುವಾಗಲು ಸವಲತ್ತು ಕಲ್ಪಿಸಿಕೊಡುವಲ್ಲಿ ಸರ್ಕಾರ ವಿಫಲವಾಗಿದೆ. ಆದ್ದರಿಂದ ಅವರಿಗೆ ರೂ 25 ಲಕ್ಷ ಇಡುಗಂಟು ನೀಡಬೇಕು. ನಿವೃತ್ತಿಯ ನಂತರದಲ್ಲಾದರೂ ಉತ್ತಮ ಬದುಕು ರೂಪಿಸಿಕೊಳ್ಳಲು ಸರ್ಕಾರ ಸ್ಪಂದಿಸಬೇಕು' ಎಂದು ಒತ್ತಾಯಿಸಿದರು.

**ಬೇಡಿಕೆಗಳು:**
ಈ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಪೀಟರ್ ಚಂದ ವಿನೋಧ ಸೇರಿದಂತೆ ಸಾವಿರಾರು ಅತಿಥಿ ಉಪನ್ಯಾಸಕರು ಇದ್ದರು.

'ರಾಜ್ಯದ 432 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 11 ಸಾವಿರಕ್ಕೂ ಹೆಚ್ಚು ಅತಿಥಿ ಉಪನ್ಯಾಸಕರು ಹಲವಾರು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದ, ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಗಣನೀಯ ಪಾತ್ರ ವಹಿಸುತ್ತಿದ್ದಾರೆ.

ಸೇವಾಭದ್ರತೆ ನೀಡಿ ಯುಜಿಸಿ ನಿಯಮಾವಳಿಯಂತೆ ವೇತನ ಹೆಚ್ಚಿಸಬೇಕೆಂದು ಹಲವಾರು ಬಾರಿ ಉಪವಾಸ, ಧರಣಿ, ಪ್ರತಿಭಟನೆ ಮತ್ತು ಹೋರಾಟ ಮೂಲಕ ಬೇಡಿಕೆ ಈಡೇರಿಸಲು ಮನವಿ ಮಾಡಿದರೂ ಈವರೆಗೂ ಸರ್ಕಾರದಿಂದ ಸೂಕ್ತ ಸ್ಪಂದನೆ ದೊರೆತಿಲ್ಲ ಎಂದು ತಿಳಿಸಿದರು.

'ಪಸ್ತುತ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ಪಕ್ಷದ ಪ್ರಣಾಳಿಕೆಯಲ್ಲಿ ಸೇವಾ ಭದ್ರತೆ ನೀಡುವುದಾಗಿ ಘೋಷಣೆ ಮಾಡಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿರೋಧ ಪಕ್ಷ ನಾಯಕರಾಗಿದ್ದ ವೇಳೆ ಈ ಬಗ್ಗೆ ಧ್ವನಿ ಎತ್ತಿದ್ದರು.

ಇದೀಗ ಅವರೇ ಅಧಿಕಾರದಲ್ಲಿದ್ದಾರೆ. ನಮ್ಮ ಬಗ್ಗೆ ಅರಿವಿರುವ ಅವರು ಸೇವಾ ಭದ್ರತೆಯ ಕುರಿತು ಸೂಕ್ತ ನಿರ್ಧಾರ ತೆಗೆದುಕೊಳ್ಳಲಿ' ಎಂದು ಮನವಿ ಸಚಿವರ ಬಳಿ ಮನವಿ ಮಾಡಿದರು.

# ಬೆಳಗಾವಿ: ಟಿಪ್ಪರ್–ಕಾರು ಅಪಘಾತ; ಬಾಲಕಿ ಸೇರಿ ಇಬ್ಬರ ಸಜೀವ ದಹನ



ಬೆಳಗಾವಿ: ಟಿಪ್ಪರ್ ಹಾಗೂ ಕಾರಿನ ನಡುವೆ ನಡೆದ ಭೀಕರ ಅಪಘಾತದಲ್ಲಿ ಇಬ್ಬರು ಸಜೀವ ದಹನಗೊಂಡ ಘಟನೆ ದೇವಗಿರಿ ಬಂಬರಗಾ ಕ್ರಾಸ್ ಬಳಿ ನಡೆದಿದೆ.

ಮೃತರನ್ನು ಬಂಬರಗಾ ಗ್ರಾಮದ ಮೋಹನ್ ಮಾರುತಿ ಬೆಳ್ಗಾಂವಕರ್ (24), ಮಚ್ಚೆ ಗ್ರಾಮದ ಬಾಲಕಿ ಸಮಿಕ್ಷಾ ಡಿಯೇಕರ್ (12) ಎಂದು ಗುರುತಿಸಲಾಗಿದೆ. ಕಾರಿನಲ್ಲಿದ್ದ ಮಹೇಶ್ ಬೆಳ್ಗಾಂವಕರ್ ಮತ್ತು ಸ್ನೇಹಾ ಬೆಳ್ಗಾಂವಕರ್ ಎಂಬವರು ಗಂಭೀರವಾಗಿ ಗಾಯಗೊಂಡಿದ್ದು, ಸ್ಥಳೀಯರು ಅವರನ್ನು ರಕ್ಷಿಸಿದ್ದಾರೆ. ಗಾಯಗೊಂಡವರಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಬುಧವಾರ ತಡರಾತ್ರಿ ಸಂಬಂಧಿಕರ ಮದುವೆ ಮುಗಿಸಿಕೊಂಡು ಗ್ರಾಮಕ್ಕೆ ವಾಪಸ್ ಆಗುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ ಎಂದು ತಿಳಿದು ಬಂದಿದೆ.

ಬಂಬರಗಾ ಕ್ರಾಸ್ ಬಳಿ ಟಿಪ್ಪರ್ ಅಡ್ಡ ಬಂದಿದ್ದು ಕಾರು ಡಿಕ್ಕಿಯಾಗಿದೆ. ಈ ವೇಳೆ ಟಿಪ್ಪರ್‌ನ ಡೀಸೆಲ್ ಟ್ಯಾಂಕ್ ಒಡೆದು ಬೆಂಕಿ ಹೊತ್ತಿಕೊಂಡಿದೆ. ಪರಿಣಾಮ ಈ ಅವಘಡ ಸಂಭವಿಸಿದೆ. ಸ್ಥಳಕ್ಕೆ ಅಗ್ನಿಶಾಮಕ ಸಿಬ್ಬಂದಿ ತೆರಳಿ ಬೆಂಕಿ ನಂದಿಸಿದ್ದಾರೆ. ಘಟನಾ ಸ್ಥಳಕ್ಕೆ ಡಿಸಿಪಿ ಸ್ನೇಹಾ ಹಾಗೂ ಕಾಕತಿ ಠಾಣೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಅಪಘಾತ ನಡೆದ ಬಳಿಕ ಟಿಪ್ಪರ್ ಚಾಲಕ ಪೊಲೀಸ್ ಠಾಣೆಗೆ ಶರಣಾಗಿದ್ದಾನೆ. ಅಪಘಾತದಲ್ಲಿ ಮೃತಪಟ್ಟ ಇಬ್ಬರ ಶವವನ್ನ ಬಿಮ್ಸ್ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ.

# ಡಾಮ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ಐಪಿಒ




ಹುಬ್ಬಳ್ಳಿ: ಡಾಮ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ತನ್ನ ಆರಂಭಿಕ ಸಾರ್ವಜನಿಕ ಷೇರು ಮಾರಾಟವನ್ನು ಡಿಸೆಂಬರ್ 13, 2023 ರ ಬುಧವಾರ ಪ್ರಾರಂಭಿಸುವುದಾಗಿ ಪ್ರಸ್ತಾಪಿಸಿದೆ. ಬಿಡ್ ಮುಕ್ತಾಯ ದಿನಾಂಕ ಡಿಸೆಂಬರ್ 15, 2023 ಶುಕ್ರವಾರ. ಆಂಕರ್ ಹೂಡಿಕೆದಾರರ ಬಿಡ್ಡಿಂಗ್ ದಿನಾಂಕವು ಬಿಡ್ ತೆರೆಯುವ ದಿನಾಂಕಕ್ಕೆ ಒಂದು ಕೆಲಸದ ದಿನ ಮುನ್ನ, ಅಂದರೆ ಮಂಗಳವಾರ, ಡಿಸೆಂಬರ್ 12, 2023.

ಷೇರು ಮಾರಾಟದ ಬೆಲೆ ಪಟ್ಟಿಯನ್ನು ಪ್ರತಿ ಈಕ್ವಿಟಿ ಷೇರಿಗೆ 750 ರೂ.ನಿಂದ 790 ರೂ. ವರೆಗೆ ನಿಗದಿಪಡಿಸಲಾಗಿದೆ. ಕನಿಷ್ಠ 18 ಈಕ್ವಿಟಿ ಷೇರುಗಳಿಗೆ ಮತ್ತು ನಂತರ 18 ಈಕ್ವಿಟಿ ಷೇರುಗಳ ಗುಣಕಗಳಲ್ಲಿ ಬಿಡ್ ಮಾಡಬಹುದು.

ಈ ಕೊಡುಗೆಯು 3,500.00 ದಶಲಕ್ಷ ರೂ. ವರೆಗಿನ ಮೌಲ್ಯಕ್ಕೆ ಸರಿದೂಗುವ ಸಂಖ್ಯೆಯ ಈಕ್ವಿಟಿ ಷೇರುಗಳ ಹೊಸ ವಿತರಣೆಯನ್ನು ಒಳಗೊಂಡಿದೆ ಮತ್ತು 8,000.00 ದಶಲಕ್ಷ ರೂ.ವರೆಗಿನ ಮೌಲ್ಯಕ್ಕೆ ಸರಿಗಟ್ಟುವ ಸಂಖ್ಯೆಯ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಈ ಪೈಕಿ ಎಫ್ಐಎಲ್ಎ'ಯಿಂದ 8,000.00 ದಶಲಕ್ಷ ಷೇರುಗಳು, ಫ್ಯಾಬ್ರಿಕಾ ಇಟಾಲಿಯನ್ ಲ್ಯಾಪಿಸ್ ಎಡ್ ಅಫಿನಿ ಎಸ್.ಪಿ.ಎ'ನಿಂದ 250.00 ದಶಲಕ್ಷ ರೂ.ವರೆಗಿನ ಈಕ್ವಿಟಿ ಷೇರುಗಳು, ಸಂಜಯ್ ಮನ್ಸುಖ್‌ಲಾಲ್ ರಜನಿ ಅವರಿಂದ 250.00 ದಶಲಕ್ಷ ರೂ.ವರೆಗಿನ ಈಕ್ವಿಟಿ ಷೇರುಗಳು ಮತ್ತು ಕೇತನ್ ಮನ್ಸುಖ್ಲಾಲ್ ರಜನಿ ಅವರಿಂದ 250.00 ದಶಲಕ್ಷ ರೂ.ವರೆಗಿನ ಈಕ್ವಿಟಿ ಷೇರುಗಳ ಒಟ್ಟಾರೆಯಾಗಿ, "ಮಾರಾಟಗಾರ ಷೇರುದಾರರು" ಮತ್ತು ಮಾರಾಟ ಮಾಡಲಾಗುವ ಅಂತಹ ಷೇರುಗಳು "ಮಾರಾಟದ ಕೊಡುಗೆ ಮಾರಾಟ ಪ್ರಸ್ತಾಪನ್ನು ಇದು ಒಳಗೊಂಡಿದೆ. ಈ ಕೊಡುಗೆಯು ಅರ್ಹ ಉದ್ಯೋಗಿಗಳ ಚಂದಾದಾರಿಕೆಗಾಗಿ 50.00 ದಶಲಕ್ಷ ರೂ.ವರೆಗೆ ಒಟ್ಟು ಸಂಖ್ಯೆಯ ಈಕ್ವಿಟಿ ಷೇರುಗಳ ಕಾಯ್ದಿರಿಸುವಿಕೆಯನ್ನು ಒಳಗೊಂಡಿದೆ.

ಕಂಪನಿಯು, ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್ ಗಳೊಂದಿಗೆ ಸಮಾಲೋಚಿಸಿ, ಉದ್ಯೋಗಿ ಮೀಸಲಾತಿ ಭಾಗದ ಅಡಿಯಲ್ಲಿ ಬಿಡ್ ಮಾಡುವ ಅರ್ಹ ಉದ್ಯೋಗಿಗಳಿಗೆ ಕೊಡುಗೆ ಬೆಲೆಗೆ ಪ್ರತಿ ಈಕ್ವಿಟಿ ಷೇರಿಗೆ 75 ರೂ.ಗೆ ಸಮಾನವಾದ ರಿಯಾಯಿತಿ ನೀಡಬಹುದು. ಉದ್ಯೋಗಿ ಮೀಸಲಾತಿ ಭಾಗವನ್ನು ಹೊರತುಪಡಿಸಿದ ಕೊಡುಗೆಯನ್ನು ಇನ್ನು ಮುಂದೆ "ನಿವ್ವಳ ಕೊಡುಗೆ" ಎಂದು ಕರೆಯಲಾಗುತ್ತದೆ.

# ಮರ ಹರಾಜು

ಧಾರವಾಡ: ಧಾರವಾಡ ಶಹರದ ವಿವಿಧ ಬಡಾವಣೆಗಳ ರಸ್ತೆ ಬದಿ ಹಾಗೂ ವಿವಿಧ ಕಛೇರಿ ಆವರಣದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿ 25 ಮರಗಳು ಹಾಗೂ 53 ಟೊಂಗೆಗಳನ್ನು ವಲಯ ಅರಣ್ಯ ಅಧಿಕಾರಿ ಧಾರವಾಡರವರ ಕಛೇರಿಯಲಿ ಡಿಸೆಂಬರ್ 14 ಮತ್ತು 21, 2023 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು. ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (VII) ರಲ್ಲಿ ಅಗತ್ಯ ಪಡಿಸಿರುವಂತೆ, ಈ ಬಗ್ಗೆ ತಕರಾರು ಸಲ್ಲಿಸಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ ಧಾರವಾಡ ಹಾಗೂ ಮರ ಅಧಿಕಾರಿಯವರಿಗೆ ಅರಣ್ಯ ಸಂಕೀರ್ಣ ಕೆ.ಸಿ.ಪಾರ್ಕ ಎದುರು ಧಾರವಾಡದಲ್ಲಿ ಇರುವ ಅವರ ಕಛೇರಿಯಲ್ಲಿ ಲಿಖಿತ ರೂಪದಲ್ಲಿ ಕಛೇರಿ ವೇಳೆಯಲ್ಲಿ ಡಿಸೆಂಬರ್ 10 ರೊಳಗಾಗಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ದೂ.ಸಂ: 0836–2447092 ಸಂಪರ್ಕಿಸಬಹುದೆಂದು ಪ್ರಕಟಣೆ ತಿಳಿಸಿದೆ.

# ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ದೀನ್‌ದಯಾಳ್ ಅಂತ್ಯೋದಯ ಯೋಜನೆ–"ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ **(DAY-NULM)** ಯೋಜನೆಯಲ್ಲಿ ವಿವಿಧ ಘಟಕಗಳಡಿಯಲ್ಲಿ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಆಸಕ್ತರು ಡಿಸೆಂಬರ್ 08, 2023ರ ಒಳಗಾಗಿ ಅಗತ್ಯ ದಾಖಲಾತಿಗಳೊಂದಿಗೆ ಈ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದಂತಹ ಹಾಗೂ ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಡೇ–ನಲ್ಮ್ ಶಾಖೆ, ಮಹಾನಗರ ಪಾಲಿಕೆ, ಬೆಳಗಾವಿ ಇಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಾನಗರ

# ಬಿಜೆಪಿಯ ಪರಾಜಿತ ಅಭ್ಯರ್ಥಿ ಮಣಿಕಂಠ ರಾಠೋಡ್ ಪೊಲೀಸರ ವಶಕ್ಕೆ



ಕಲಬುರ್ಗಿ: ಪ್ರಿಯಾಂಕ್ ಖರ್ಗೆ ಬೆಂಬಲಿಗರು ನನ್ನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಅಪಘಾತವನ್ನು ಕೊಲೆ ಯತ್ನ ಬಿಂಬಿಸಲು ಹೋಗಿ ಚಿತ್ತಾಪುರ ಕ್ಷೇತ್ರದ ಬಿಜೆಪಿ ಪರಾಜಿತ ಅಭ್ಯರ್ಥಿ ಮಣಿಕಂಠ ರಾಠೋಡನನ್ನು ಇದೀಗ ಪೊಲೀಸರು ವಶಪಡಿಸಿಕೊಂಡಿದ್ದಾರೆ.

ನಗರದ ಚೌಕ್ ಪೊಲೀಸ್ ಠಾಣೆ ಅಧಿಕಾರಿಗಳಿಂದ ಮಣಿಕಂಠ ರಾಠೋಡ್ ವಶಪಡಿಸಿಕೊಂಡಿದ್ದು, ಕಲಬುರ್ಗಿಯ ಭಾರತ ಪ್ರೈಡ್ ಅಪಾರ್ಟ್ಮೆಂಟ್ ನಲ್ಲಿ ರಾಠೋಡ್ ನನ್ನು ವಶಕ್ಕೆ ಪಡೆದುಕೊಳ್ಳಲಾಗಿದೆ. ನಿನ್ನೆಷ್ಟೇ ಆಕ್ಸಿಡೆಂಟ್ ಅನ್ನು ಕೊಲೆ ಯತ್ನ ಅಂತ ಮಣಿಕಂಠ ರಾಠೋಡ್ ಬಿಂಬಿಸಿದ್ದ ಎನ್ನಲಾಗುತ್ತಿದೆ. ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗರು ಹಲ್ಲೆ ನಡೆಸಿದ್ದಾರೆಂದು ಆರೋಪಿಸಿದ್ದ.ಈ ಬಗ್ಗೆ ಇಂದು ಮಣಿಕಂಠ ಸುದ್ದಿಗೋಷ್ಠಿ ಕೂಡ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಗೂ ಮೊದಲೇ ಪೊಲೀಸರು ಮಣಿಕಂಠ ರಾಠೋಡ್ ಅನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

# ಸೇವಾಭದ್ರತೆ ಒದಗಿಸುವಂತೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೊರಗುತ್ತಿಗೆ ಮತ್ತು ಸಿಡಿಸಿ ನೌಕರರ ಸಂಘ ಒತ್ತಾಯ



ಬೆಳಗಾವಿ: ತಾಲ್ಲೂಕಿನ ಹಲಗಾ ಗ್ರಾಮದ ಸುವರ್ಣ ವಿಧಾನಸೌಧ ಬಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೊರಗುತ್ತಿಗೆ ಮತ್ತು ಸಿಡಿಸಿ ನೌಕರರ ಸಂಘದವರು ಗುರುವಾರ ಪ್ರತಿಭಟನೆ ನಡೆಸಿದರು.

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅನ್‌ಸ್ಕಿಲ್ಡ್ ನೌಕರರಾಗಿ ಮತ್ತು ಕಾಲೇಜು ಅಭಿವೃದ್ಧಿ ಸಮಿತಿ (ಸಿಡಿಸಿ) ಮೂಲಕ ನೇಮಕಗೊಂಡು ಸ್ವಚ್ಛತೆ ಮತ್ತು ಇತರೆ ಕೆಲಸಗಳನ್ನು ನಿರ್ವಹಿಸುತ್ತಿರುವ ನಮಗೆ ಸೇವಾಭದ್ರತೆ ಒದಗಿಸಬೇಕು' ಎಂದು ಆಗ್ರಹಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಹೊರಗುತ್ತಿಗೆ ಮತ್ತು ಸಿಡಿಸಿ ನೌಕರರ ಸಂಘದವರು ಪ್ರತಿಭಟಿಸಿದರು.

ಹೊರಗುತ್ತಿಗೆ ಪದ್ಧತಿ ರದ್ದುಪಡಿಸಿ, ಉನ್ನತ ಶಿಕ್ಷಣ ಇಲಾಖೆಯಿಂದಲೇ ನಮ್ಮನ್ನು ನೇರವಾಗಿ ನೇಮಕ ಮಾಡಿಕೊಳ್ಳಬೇಕು. ಹಲವು ವರ್ಷಗಳಿಂದ ಕಾಲೇಜುಗಳಲ್ಲಿ ದುಡಿಯುತ್ತಿರುವವರಿಗೆ ನೇಮಕಾತಿಯಲ್ಲಿ ಆದ್ಯತೆ ನೀಡಬೇಕು. ಎಸ್ಸೆಸ್ಸೆಲ್ಸಿ ಉತ್ತೀರ್ಣವಾಗಿರಬೇಕೆಂಬ ಮಾನದಂಡ ಕೈಬಿಡಬೇಕು' ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಬಿ.ಜಿ.ಹನುಮಂತಪ್ಪ, ಶಿವಶಂಕರ ಅಂಗಡಿ, ಮಲ್ಲಿಕಾರ್ಜುನ ಮುಳವಾಡ, ಎಚ್.ಚನ್ನಮೂರ್ತಿ, ಚೇತನ ನುನ್ನಾ, ನೇತ್ರಾವತಿ, ರಂಗಮ್ಮ ಚೇತನ ಇತರರಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯ; ಚನ್ನಮ್ಮ ವೃತ್ತದಿಂದ ಪ್ರತಿಭಟನೆ ಟೆಂಟ್ ವರೆಗೂ ಹೆಜ್ಜೆ ಹಾಕಿದ ರೈತರು

ಬೆಳಗಾವಿ: ರೈತರ ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ನಗರದ ಚನ್ನಮ್ಮ ವೃತ್ತದಿಂದ ಸುವರ್ಣ ಗಾರ್ಡನ್ ಟೆಂಟ್ ವರೆಗೆ ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ ನೇತೃತ್ವದಲ್ಲಿ ರೈತರು ಬೃಹತ್ ಪಾದಯಾತ್ರೆ ನಡೆಸಿದರು.

ರಾಣಿ ಚನ್ನಮ್ಮ ವೃತ್ತದಲ್ಲಿ ಜಮಾವಣೆಗೊಂಡ ಸಾವಿರಾರು ರೈತರು ಅರ್ಧ ಗಂಟೆಗೂ ಹೆಚ್ಚು ಸಮಯ ಪ್ರತಿಭಟನೆ ನಡೆಸಿದರು. ರೈತರ ಪ್ರತಿಭಟನೆಗೆ ಮೇಲುಕೋಟೆ ಶಾಸಕ ದರ್ಶನ ಪುಟ್ಟಣ್ಣಯ್ಯ ಕೂಡ ಸಾಥ್ ಕೊಟ್ಟರು. ಚನ್ನಮ್ಮ ವೃತ್ತದಿಂದ ಪಾದಯಾತ್ರೆ ಆರಂಭಿಸಿದ ರೈತರು ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಆಕ್ರೋಶ ವ್ಯಕ್ತ ಪಡಿಸಿದರು.

ರೈತರ ಸಂಪೂರ್ಣ ಸಾಲಮನ್ನಾ, ಮಹಾದಾಯಿ ಯೋಜನೆ ಜಾರಿ, ಸ್ವಾಮಿನಾಥನ್ ವರದಿ ಜಾರಿ ಸೇರಿ ಇನ್ನಿತರ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿದ ರೈತರು ರಸ್ತೆ ಮೇಲೆ ಬಾರುಕೋಲಿನಿಂದ ಬಾರಿಸಿ, ಬಾಯಿ ಬಾಯಿ ಬಡಿದುಕೊಂಡು ಆಕ್ರೋಶ ವ್ಯಕ್ತಪಡಿಸಿದರು.



ಈ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಶಾಸಕ ದರ್ಶನ ಪುಟ್ಟಣ್ಣಯ್ಯ, ಹಲವು ದಶಕಗಳಿಂದ ಹೋರಾಟ ಮಾಡಿಕೊಂಡು ಬಂದರೂ ರೈತರ ಬೇಡಿಕೆಗಳು ಮಾತ್ರ ಈಡೇರುತ್ತಿಲ್ಲ. ತುರ್ತಾಗಿ ಬರದಿಂದ ಕಂಗೆಟ್ಟಿರುವ ರೈತರಿಗೆ ದೊಡ್ಡ ಮಟ್ಟದ ಪರಿಹಾರವನ್ನು ಸರ್ಕಾರ ಘೋಷಿಸಬೇಕು. ಅದೇ ರೀತಿ ಬರವನ್ನು ತಡೆಗಟ್ಟುವುದು ಹೇಗೆ ಎಂಬ ಬಗ್ಗೆಯೂ ಚಿಂತಿಸಬೇಕು. ಈಗ ಪಾದಯಾತ್ರೆ ಮೂಲಕ ಹೋರಾಟ ಆರಂಭಿಸಿದ್ದೇವೆ. ಸದನದಲ್ಲೂ ಈ ಬಗ್ಗೆ ಧ್ವನಿ ಎತ್ತುತ್ತೇನೆ.

ಈ ಭಾಗದ ಮಹದಾಯಿ ಸೇರಿ ಪ್ರಮುಖ ನೀರಾವರಿ ಯೋಜನೆಗಳು ಶೀಘ್ರವೇ ಆಗಬೇಕಿದೆ ಎಂದು ತಿಳಿಸಿದರು.

ಪಾದಯಾತ್ರೆ ಮಾಡದಂತೆ ಪೊಲೀಸರು ತಡೆಯಲು ಯತ್ನಿಸಿದರೂ ಕೂಡ ರೈತರು ಮಾತ್ರ ಸುವರ್ಣ ವಿಧಾನಸೌಧ ಬಳಿಯ ಸುವರ್ಣ ಗಾರ್ಡನ್ ಪ್ರತಿಭಟನೆ ಟೆಂಟ್ ವರೆಗೂ ಸಾವಿರಕ್ಕೂ ಹೆಚ್ಚು ರೈತರು ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿದರು. ಚನ್ನಮ್ಮ ವೃತ್ತದಿಂದ ಸುವರ್ಣ ಗಾರ್ಡನ್ ಟೆಂಟ್ ವರೆಗೆ ನಡೆದು ಹೋಗುವ ದಾರಿಯಲ್ಲಿ ಸುವರ್ಣ ವಿಧಾನಸೌಧ ಸಮೀಪಿಸುತ್ತಿದ್ದಂತೆ ರಾಷ್ಟ್ರೀಯ ಹೆದ್ದಾರಿ ಮೂಲಕ ಸುವರ್ಣ ವಿಧಾನಸೌಧ ಆವರಣಕ್ಕೆ ನುಗ್ಗಲು ಯತ್ನಿಸಿದರು. ಈ ವೇಳೆ ಪೊಲೀಸರು ಮತ್ತು ರೈತರ ನಡುವೆ ವಾಗ್ವಾದ ನಡೆಯಿತು.

# ಕಳಪೆ ಆಹಾರ: ಪೊಲೀಸರ ಆಕ್ರೋಶ

ಬೆಳಗಾವಿ:ಇಲ್ಲಿನ ಸುವರ್ಣ ವಿಧಾನಸೌಧದಲ್ಲಿ ನಡೆದಿರುವ ಚಳಿಗಾಲ ಅಧಿವೇಶನ ಭದ್ರತೆಗಾಗಿ ವಿವಿಧ ಜಿಲ್ಲೆಗಳಿಂದ ಆಗಮಿಸಿರುವ ನೂರಾರು ಪೊಲೀಸ್ ಅಧಿಕಾರಿಗಳು, ಸಿಬ್ಬಂದಿ ಕಳಪೆ ಉಪಹಾರ ಹಾಗೂ ಆಹಾರ ಪೂರೈಸುತ್ತಿರುವ ಬಗ್ಗೆ ಬುಧವಾರ ಆಕ್ರೋಶ ಹೊರ ಹಾಕಿದ್ದಾರೆ.

ಸುವರ್ಣ ವಿಧಾನಸೌಧದ ಬಳಿ ಪ್ರತಿಭಟನಾಕಾರರಿಗೆ ಹಾಕಲಾದ ಟೆಂಟ್ ಬಳಿ ಭದ್ರತೆಗೆ ನಿಯೋಜನೆಗೊಂಡಿರುವ ಪೊಲೀಸ್ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗೆ ಊಟದ ವ್ಯವಸ್ಥೆ ಮಾಡಲಾಗಿದೆ. ಆದರೆ, ಕಳೆದೆರಡು ದಿನಗಳಿಂದ ಸರಿಯಾದ



ಊಟ ಬಡಿಸುತ್ತಿಲ್ಲ. ಇನ್ನೂ ಊಟ ಮಾಡುವವರಿದ್ದರೂ ಎಲ್ಲವೂ ಖಾಲಿ ಆಗಿದೆ ಎನ್ನುತ್ತಿದ್ದಾರೆ ಎಂದು ಅಸಮಾಧಾನ ಹೊರಹಾಕಿದರು.

ಕಳೆದು ಎರಡು ದಿನಗಳಿಂದ ಸರಿಯಾಗಿ ಊಟ ಸಿಗುತ್ತಿಲ್ಲ. ಅರ್ಧ ಹೊಟ್ಟೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದೇವೆ. ಬುಧವಾರ ಮಧ್ಯಾಹ್ನ ಹಸಿಬಿಸಿಯಾಗಿ ಬೇಯಿಸಿದ ಪಲ್ಲೆ ಮಾಡಲಾಗಿದೆ. ಎರಡು ದಿನಗಳಿಂದ ಅನ್ನ, ಸಾಂಬರು ಊಟ ಮಾಡಲು ಸಹ ಆಗುತ್ತಿಲ್ಲ. ಉಪ್ಪು, ಖಾರಾ ಎರಡೂ ಇಲ್ಲದಂತಹ ಸಾಂಬಾರು ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಆಹಾರ ಪೂರೈಸುವ ಗುತ್ತಿಗೆದಾರರ ವಿರುದ್ಧ ಹರಿಹಾಯ್ದರು.

# ಮರ ಹರಾಜು

ಧಾರವಾಡ: ಧಾರವಾಡ ಶಹರದ ವಿವಿಧ ಬಡಾವಣೆಗಳ ರಸ್ತೆ ಬದಿ ಹಾಗೂ ವಿವಿಧ ಕಛೇರಿ ಆವರಣದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿ 25 ಮರಗಳು ಹಾಗೂ 53 ಟೊಂಗೆಗಳನ್ನು ವಲಯ ಅರಣ್ಯ ಅಧಿಕಾರಿ ಧಾರವಾಡರವರ ಕಛೇರಿಯಲಿ ಡಿಸೆಂಬರ್ 14 ಮತ್ತು 21, 2023 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.

ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (VII) ರಲ್ಲಿ ಅಗತ್ಯ ಪಡಿಸಿರುವಂತೆ, ಈ ಬಗ್ಗೆ ತಕರಾರು ಸಲ್ಲಿಸಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ ಧಾರವಾಡ ಹಾಗೂ ಮರ ಅಧಿಕಾರಿಯವರಿಗೆ ಅರಣ್ಯ ಸಂಕೀರ್ಣ ಕೆ.ಸಿ.ಪಾರ್ಕ ಎದುರು ಧಾರವಾಡದಲ್ಲಿ ಇರುವ ಅವರ ಕಛೇರಿಯಲ್ಲಿ ಲಿಖಿತ ರೂಪದಲ್ಲಿ ಕಛೇರಿ ವೇಳೆಯಲ್ಲಿ ಡಿಸೆಂಬರ್ 10 ರೊಳಗಾಗಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಚೇರಿ ದೂ.ಸಂ: 0836–2447092 ಸಂಪರ್ಕಿಸಬಹುದೆಂದು ಪ್ರಕಟಣೆ ತಿಳಿಸಿದೆ.

# ಸುವರ್ಣಸೌಧದ ಎದುರು ವಿಕಲಚೇತನರ ಬೃಹತ್ ಪ್ರತಿಭಟನೆ

ಬೆಳಗಾವಿ: ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಗುರುವಾರ ಕರ್ನಾಟಕ ರಾಜ್ಯ ವಿಕಲಚೇತನರ ಹಾಗೂ ವಿವಿದೋದ್ದೇಶ (ಎಂ. ಆರ್.ಡಬ್ಲ್ಯೂ.) ಮತ್ತು ಗ್ರಾಮೀಣ ಪುನರ್ವಸತಿ (ಬಿ.ಆರ್.ಡಬ್ಲ್ಯೂ.) ಹಾಗೂ ನಗರ ಪುನರ್ವಸತಿ (ಯು. ಆರ್. ಡಬ್ಲ್ಯೂ) ಕಾರ್ಯಕರ್ತರ ರಾಜ್ಯ ಒಕ್ಕೂಟ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ರಾಜ್ಯಾಧ್ಯಕ್ಷ ಕೆ. ಸುಬ್ರಮಣ್ಯಂ ಮಾತನಾಡಿ, ಕಳೆದ 15 ವರ್ಷಗಳಿಂದ ವಿಕಲಚೇತನರಾದ ನಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿ ಸುತ್ತಾ ಬಂದಿದ್ದರೂ ನಮ್ಮ ಮನವಿಗೆ ಯಾವುದೇ ಸರಕಾರ ಸ್ಪಂದಿಸುತ್ತಿಲ್ಲ. ಸಮಾಜದ ಕಟ್ಟ ಕಡೆಯ ವಿಕಲಚೇತನರು ಕಳೆದ ಹಲವಾರು ವರ್ಷಗಳಿಂದ ವಿಕಲಚೇತನರ ಸರ್ವಾಂಗೀಣ ಅಭಿವೃದ್ಧಿ ನಿಟ್ಟಿನಲ್ಲಿ ಸರಕಾರದ ಯೋಜನೆಗಳನ್ನು ಮನೆ ಬಾಗಿಲಿಗೆ ತಲುಪಿಸುವ ಕೆಲಸ ಮಾಡುತ್ತಾ ಬಂದಿದ್ದೇವೆ ಎಂದರು.

ಒಂದೆಡೆ ನಮಗೆ ನೀಡುವ ವೇತನ ಜೀವನ ನಿರ್ವಹಣೆ ಮಾಡಲು ಸಾಕಾಗುತ್ತಿಲ್ಲ. ಮತ್ತೊಂದೆಡೆ ನಮ್ಮ ಹುದ್ದೆಗಳನ್ನು ಖಾಯಂ ಮಾಡುತ್ತಿಲ್ಲ. ಆದ್ದರಿಂದ ಖಾಯಂ ಆಗುವವರೆಗೆ ಎಂಆರ್ ಡಬ್ಲ್ಯೂ ಸಹಿತ ವಿಆರ್ ಡಬ್ಲ್ಯೂ, ಯುಆರ್ ಡಬ್ಲ್ಯೂ ಕಾರ್ಯಕರ್ತರಿಗೆ 18 ಸಾವಿರ ರೂ. ವೇತನ ನೀಡಬೇಕು. ಅಲ್ಲದೆ ನಮಗೆ ಪ್ರತ್ಯೇಕ ನಿಗಮ ರಚನೆ ಆಗಬೇಕು ಎಂದು ಒತ್ತಾಯಿಸಿದರು.

ವಿಕಲಚೇತನರ ಹಾಗೂ ಹಿರಿಯ ನಾಗರೀದಕರ ಸಬಲೀಕರಣ ಇಲಾಖೆಯಡಿ ಕಳೆದ 15 ವರ್ಷಗಳಿಂದ ವಿಕಲಚೇತನರೇ ಆದ ವಿಕಲಚೇತನರು ಮತ್ತು ಹಿರಿಯ ನಾಗರೀಕರಿಗಾಗಿ ಕರ್ತವ್ಯ ನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂ., ಯು.ಆರ್.ಡಬ್ಲ್ಯೂ., ಎಂ.ಆರ್.ಡಬ್ಲ್ಯೂ.ರವರ ಅವಿರತ ಶ್ರಮದಿಂದಾಗಿ ಇಂದು ಕಟ್ಟಕಡೆಯ ವಿಕಲಚೇತನರನ್ನು ಗುರ್ತಿಸಿ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತಂದು ಆರ್ಥಿಕ, ಸಮಾಜಿಕ, ಶೈಕ್ಷಣಿಕ, ವೈದ್ಯಕೀಯ, ಔದ್ಯೋಗಿಕ ಪುನರ್‌ವಸತಿ ಕಲ್ಪಿಸುತ್ತಿದ್ದೇವೆ ಎಂದರು.

ಈ ನೌಕರರ ಅವಿರತ ಶ್ರಮದಿಂದ ಮಾನ ಕೇಂದ್ರ ಸರ್ಕಾರವು ವಿಕಲಚೇತನರ ಕ್ಷೇತ್ರದಲ್ಲಿ 2018–19, 2019–20 ನೇ ಸಾಲಿನಲ್ಲಿ ಇಲಾಖೆಗೆ ರಾಷ್ಟ್ರ ಪ್ರಶಸ್ತಿಯು ದೊರೆತಿರುವುದು ಉಲ್ಲೇಖನಿಯ. ಆದರೆ, 15 ವರ್ಷಗಳಿಂದ ಕಾರ್ಯಕರ್ತರು ಕನಿಷ್ಠ ಮೂಲಭೂತ ಸೌಲಭ್ಯಗಳಿಲ್ಲದೆ ವಿಕಲಚೇತನರ ಹಾಗೂ ಹಿರಿಯ ನಾಗರೀಕರಿಗಾಗಿ ಯಾವುದೇ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಕಡಿಮೆ ಇಲ್ಲದಂತೆ ಕರ್ತವ್ಯ ನಿರ್ವಹಿಸುತ್ತಿದ್ದೇವೆ.

ಇಲಾಖೆಗೆ ಗ್ರಾಮ ಮಟ್ಟದಿಂದ ಜಿಲ್ಲಾ ಮಟ್ಟದವರೆಗೆ ಕೊಂಡಿಯಂತೆ ಕರ್ತವ್ಯ ನಿರ್ವಹಿಸುತ್ತಾ ಯಾವುದೇ ಸೇವಾ ಭದ್ರತೆ ಸೌಲಭ್ಯಗಳಿಲ್ಲದೆ ಕರ್ತವ್ಯ ನಿರ್ವಹಿಸುತ್ತಿದ್ದು ನಮ್ಮ ಸೇವೆಯನ್ನು ಪರಿಗಣಿಸಿ ಮಾನವಿಯಂತೆ ಆಧಾರದ ಮೇಲೆ ಖಾಯಂಗೊಳಿಸಬೇಕೆಂದು ಕಳೆದ 14 ವರ್ಷಗಳಿಂದ



ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಸಹ ಯಾವುದೇ ಪ್ರಯೋಜನವಾಗಲಿಲ್ಲ. ನಮ್ಮ ಬೇಡಿಕೆಗಳು ಆರಣ್ಯರೋಧನವಾಗಿದೆ. ಅದ್ದರಿಂದ ನಮ್ಮ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ಮೂಂದಾಗಬಕು ಎಂದು ಒತ್ತಾಯಿಸಿರು.

**ಬೇಡಿಕೆಗಳು:** ಕಳೆದ 15 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ವಿ.ಆರ್.ಡಬ್ಲ್ಯೂ., ಯು.ಆರ್. ಡಬ್ಲ್ಯೂ, ಎಂ.ಆರ್.ಡಬ್ಲ್ಯೂ.ರವರ ಸೇವೆಯನ್ನು ಖಾಯಂಗೊಳಿಸಬೇಕು. ವಿಕಲಚೇತನರ ಹಾಗೂ ಹಿರಿಯ ನಾಗರೀಕರಿಗಾಗಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸಬೇಕು, 15 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ವಿ.ಆರ್.ಡಬ್ಲ್ಯೂ., ಯು.ಆರ್. ಡಬ್ಲ್ಯೂ., ಎಂ.ಆರ್.ಡಬ್ಲ್ಯೂ.ರವರ ಖಾಯಂ ಅತಿ ಆಗುವವರೆಗೆ ಕನಿಷ್ಠ ವೇತನಕ್ಕೆ ಒಳಪಡಿಸಬೇಕು, ವಿ.ಆರ್.ಡಬ್ಲ್ಯೂ., ಯು.ಆರ್.ಡಬ್ಲ್ಯೂ., ಎಂ.ಆರ್. ಡಬ್ಲ್ಯೂ.ರವರಿಗೆ ಸೇವಾ ಭದ್ರತೆ ಕಲ್ಪಿಸಬೇಕು, ವಿಕಲಚೇತನರಿಗಾಗಿ ಪ್ರತ್ಯೇಕ ಅಭಿವೃದ್ಧಿ ನಿಗಮ ರಚಿಸಬೇಕು, ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಿದ್ದಾರೆ.

ಪ್ರತಿಭಟನೆಯಲ್ಲಿ ರಾಜ್ಯ ಸಂಚಾಲಕ ಜೆ. ದೇವರಾಜ್, ಎಸ್, ಕೃಷ್ಣಪ್ಪ ಸೇರಿದಂತೆ ಕರ್ನಾಟಕ ರಾಜ್ಯ ವಿಕಲಚೇತನರ ಹಾಗೂ ವಿವಿದೋದ್ದೇಶ (ಎಂ.ಆರ್.ಡಬ್ಲ್ಯೂ.) ಮತ್ತು ಗ್ರಾಮೀಣ ಪುನರ್ವಸತಿ (ಬಿ.ಆರ್.ಡಬ್ಲ್ಯೂ.) ಹಾಗೂ ನಗರ ಪುನರ್ವಸತಿ (ಯು. ಆರ್. ಡಬ್ಲ್ಯೂ) ಕಾರ್ಯಕರ್ತರ ರಾಜ್ಯ ಒಕ್ಕೂಟದ ಸಾವಿರಾರೂ ಸಂಖ್ಯೆಯ ವಿಕಲಚೇತನರು ಭಾಗವಹಿಸಿದ್ದರು.

ಶೀಘ್ರದಲ್ಲೇ ಎಲ್ಲ ಬೇಡಿಕೆಗಳನ್ನು ಸಿಎಂ ಸಿದ್ದರಾಮಯ್ಯನವರ ಗಮನಕ್ಕೆ ತಂದು, ಬೇಡಿಕೆಗಳ ಈಡೇರಿಕೆಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಪ್ರತಿಭಟನಾಕಾರರಿಗೆ ಭರವಸೆ ನೀಡಿದರು.



## ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಭರವಸೆ:

ಕರ್ನಾಟಕ ರಾಜ್ಯ ವಿಕಲಚೇತನರ ಹಾಗೂ ವಿವಿಧದೋದ್ದೇಶ (ಎಂ.ಆರ್.ಡಬ್ಲ್ಯೂ) ಮತ್ತು ಗ್ರಾಮೀಣ ಪುನರ್ವಸತಿ (ವಿ.ಆರ್.ಡಬ್ಲ್ಯೂ) ಹಾಗೂ ನಗರ ಪುನರ್ವಸತಿ (ಯು.ಆರ್.ಡಬ್ಲ್ಯೂ) ಕಾರ್ಯಕರ್ತರ ರಾಜ್ಯ ಒಕ್ಕೂಟ (ರಿ) ಇವರ ವಿವಿಧ ಬೇಡಿಕೆ ಈಡೇರಿಕೆಗಾಗಿ ಸುವರ್ಣ ಗಾರ್ಡನ್ ಟೆಂಟ್ ನಂ. 6 ರಲ್ಲಿ ಹಮ್ಮಿಕೊಂಡಿದ್ದ ಪ್ರತಿಭಟನಾ ಸ್ಥಳಕ್ಕೆ ತೆರಳಿ, ಅವರ ಕುಂದುಕೊರತೆಗಳನ್ನು ಆಲಿಸಿ, ಅವರ ಬೇಡಿಕೆಗಳ ಬಗ್ಗೆ ಗಮನ ಹರಿಸಿ ಮಾಹಿತಿಯನ್ನು ಪಡೆದು ಮನವಿಯನ್ನು ಸ್ವೀಕರಿಸಿದರು.

# ಉತ್ತರ ಕನ್ನಡ ಜಿಲ್ಲೆಗೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಮಾಡುವಂತೆ ಆಗ್ರಹಿಸಿ ಮನವಿ

15 ಲಕ್ಷ ಜನಸಂಖ್ಯೆ ಇರುವ ಉತ್ತರಕನ್ನಡ ಜಿಲ್ಲೆ ಇಲ್ಲ ಸುಸಜ್ಜಿತ ಆಸ್ಪತ್ರೆ; ಸರ್ಕಾರ ವಿರುದ್ಧ ಪ್ರತಿಭಟನಾಕಾರರ ಕೆಂಡಾಮಂಡಲ


ಬೆಳಗಾವಿ: ಉತ್ತರ ಕನ್ನಡ ಜಿಲ್ಲೆಗೆ ಸುಸುಜ್ಜಿತವಾದ ಆಸ್ಪತ್ರೆ ಇಲ್ಲದೇ ರೋಗಿಗಳ ನರಳುತ್ತಿದ್ದು, ಈ ಭಾಗಕ್ಕೆ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಮಾಡಬೇಕು ಎಂದು ಆಗ್ರಹಿಸಿ ಅನಂತಮೂರ್ತಿ ಹೆಗಡೆಯವರ ನೇತೃತ್ವದಲ್ಲಿ ಸುವರ್ಣಸೌಧ ಬಳಿ ಧರಣಿ ಸತ್ಯಾಗ್ರಹ ನಡೆಸಿದರು.

ದೇಶದ ಪ್ರತಿಯೊಬ್ಬ ವ್ಯಕ್ತಿಗೆ ಆಹಾರ, ಆರೋಗ್ಯ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಜವಾಬ್ದಾರಿ ಮತ್ತು ಕರ್ತವ್ಯ ಸರ್ಕಾರದ್ದಾಗಿದೆ. ಆದರೆ, ನಮ್ಮ ಉತ್ತರಕನ್ನಡ ಜಿಲ್ಲೆ ಇನ್ನೂ ಅನೇಕ ಅಭಿವೃದ್ಧಿ ಕಾರ್ಯಗಳಿಂದ ವಂಚಿತವಾಗಿ ಹಿಂದುಳಿದಿದೆ.

ಸರ್ಕಾರ ಇಚ್ಛಾಶಕ್ತಿಯಿಂದ ಉತ್ತರ ಕನ್ನಡ ಜಿಲ್ಲೆಗೆ ಸುಸುಜ್ಜಿತವಾದ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ ಮಾಡಬೇಕು. ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಪ್ರತಿಭಟನಾ ಸ್ಥಳಕ್ಕೆ ಆಗಮಿಸಿ ಮನವಿ ಸ್ವೀಕರಿಸಿ ಅಧಿವೇಶನದಲ್ಲಿ ಸರ್ಕಾರ ಗಮನ ಸೆಳೆಯಬೇಕು ಎಂದು ಒತ್ತಾಯಿಸಿದರು.

**ಚಿಕಿತ್ಸೆಗಾಗಿ ಪರದಾಟ; ಪ್ರತಿಭಟನೆಯಲ್ಲಿ ಆಕ್ರೋಶ**

15 ಲಕ್ಷಕ್ಕೂ ಹೆಚ್ಚಿನ ಜನಸಂಖ್ಯೆ, 12 ತಾಲ್ಲೂಕುಗಳನ್ನೊಳಗೊಂಡ ನಮ್ಮ ಉತ್ತರಕನ್ನಡ ಜಿಲ್ಲೆ ಮುತ್ಸದ್ಧಿ ರಾಜಕಾರಣಿಗಳನ್ನು, ಕಲಾವಿದರನ್ನು ಪತ್ರಕರ್ತರನ್ನು ಹಾಗೂ ವಿವಿಧ ಕ್ಷೇತ್ರದಲ್ಲಿನ ನೂರಾರು ಸಾಧಕರನ್ನು ನೀಡಿದ ಬುದ್ಧಿವಂತರ ಜಿಲ್ಲೆ ಎನ್ನುವ ಗರಿಮೆ ನಮಗಿದೆ. ದುರದೃಷ್ಟವಷಾತ್ ನಮಗೆ ಒಂದು ಸೂಕ್ತವಾದ ಮೆಡಿಕಲ್ ಕಾಲೇಜು ಮತ್ತು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲವಾಗಿದೆ. ಇದರಿಂದ ಪ್ರತಿನಿತ್ಯ ಜಿಲ್ಲೆಯ ನೂರಾರು ಜನರು ಸೂಕ್ತ ಚಿಕಿತ್ಸೆ ಸಿಗದೇ ದಿಕ್ಕು ದೆಸೆ ಇಲ್ಲದೆ ಪ್ರಾಣಕಳೆದುಕೊಳ್ಳುತ್ತಿದ್ದಾರೆ. ಜಿಲ್ಲೆಯಿಂದ ಪ್ರತಿ ನಿತ್ಯ ಹೆಚ್ಚಿನ ಚಿಕಿತ್ಸೆ ಬಯಸಿ 300 ಕ್ಕೂ ಹೆಚ್ಚು ಜನ ದೂರದ ಮಂಗಳೂರಿಗೆ ಅಥವಾ ಬೆರೆಡೆಗೆ



ಪ್ರಯಾಣ ಬೆಳೆಸುತ್ತಿದ್ದು, ಮಾರ್ಗಮಧ್ಯದಲ್ಲಿಯೇ ಸಾವನ್ನೊಪ್ಪುವವರ ಸಂಖ್ಯೆ ಹೆಚ್ಚಾಗಿದೆ ಎಂದುಕಳವಳ ವ್ಯಕ್ತಪಡಿಸಿದರು.

ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಗಾಗಿ ಅಗತ್ಯಕ್ರಮಗಳನ್ನು ಈ ಕೂಡಲೆ ಕ್ರಮ ಕೈಗೊಳ್ಳಬೇಕೆಂದು ಮುಖ್ಯಮಂತ್ರಿ, ಆರೋಗ್ಯ ಸಚಿವರು, ಜಿಲ್ಲಾ ಉಸ್ತುವಾರಿ ಸಚಿವರಿಗೆ ಆಗ್ರಹಿಸಿದರು.

ಅನಂತಮೂರ್ತಿ ಹೆಗಡೆ ಚ್ಯಾರಿಟೇಬಲ್ ಟ್ರಸ್ಟ್ ಅಧ್ಯಕ್ಷರಾದ ಅನಂತಮೂರ್ತಿ ಹೆಗಡೆ ಮಾತನಾಡಿ, 15 ಲಕ್ಷಕ್ಕೂ ಹೆಚ್ಚಿನ ಜನ ಸಂಖ್ಯೆ ಹೊಂದಿರುವ ಉತ್ತರಕನ್ನಡ ಜಿಲ್ಲೆ, 12 ತಾಲ್ಲೂಕುಗಳನ್ನು ಒಳಗೊಂಡಿದೆ. ಶಿರಸಿ, ಸಿದ್ಧಾಪುರ,ಯಲ್ಲಾಪುರ, ಮುಂಡಗೊಡು, ಹಳಿಯಾಳ, ದಾಂಡೇಲಿ ಭಾಗಕ್ಕೆ ಒಂದು ಮತ್ತು ಕುಮಟಾ, ಅಂಕೋಲಾ, ಕಾರವಾರವಾರ,ಹೊನ್ನಾವರ, ಭಟ್ಕಳ ಪ್ರದೇಶಗಳಿಗೆ ಎರಡು ಮೆಡಿಕಲ್ ಕಾಲೇಜು ಮತ್ತು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಈ ಕೂಡಲೆ ಮಂಜೂರು ಮಾಡಬೇಕು ಎಂದರು ಮನವಿ ಮಾಡಿಕೊಂಡರು.

ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಜೊತೆ ಜೊತೆಗೆ ಮೆಡಿಕಲ್ ಕಾಲೇಜು ನಿರ್ಮಿಸುವುದರಿಂದ ವೈದ್ಯಕೊರತೆ ನೀಗಿಸಬಹುದು. ಸರ್ಕಾರ ಈ ಭಾಗದ ಜನರ ಆರೋಗ್ಯ ದೃಷ್ಟಿಯಿಂದ ಶೀಘ್ರವೇ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯನ್ನು ಮಂಜೂರು ಮಾಡಿ ಸೂಕ್ತ ಸ್ಥಳದಲ್ಲಿ ನಿರ್ಮಿಸಬೇಕು. ನಮ್ಮ ಬೇಡಿಕೆಗೆ ನಿಲಕ್ಷ್ಯ ವಹಿಸಿದರೆ ಮುಂದಿನ ದಿನಗಳಲ್ಲಿ ಜನಾಂದೋಲನ ರೂಪಿಸಿ ಉಗ್ರ ಹೋರಾಟ ಮಾಡಲಾಗುವುದಾಗಿ ಸರ್ಕಾರಕ್ಕೆ ಎಚ್ಚರಿಕೆ ರವಾನಿಸಿದರು.

ಶಾಸಕ ಶಿವರಾಂ ಹೆಬ್ಬಾರ್ ಭರವಸೆ; ಅನಂತಮೂರ್ತಿ ಹೆಗಡೆಯವರ ನೇತೃತ್ವದಲ್ಲಿ ನಡೆಸಲಾದ ಧರಣಿ ಸತ್ಯಾಗ್ರಹ ಸ್ಥಳಕ್ಕೆ ಶಾಸಕ ಶಿವರಾಂ ಹೆಬ್ಬಾರ್ ಭೇಟಿ ನೀಡಿದರು. ಸೂಕ್ತ ಚಿಕಿತ್ಸೆ ಸಿಗದೇ ಸಾಕಷ್ಟು ರೋಗಿಗಳು ನಡುದಾರಿಯಲ್ಲಿ ಜೀವ ಕಳೆದುಕೊಂಡಿದ್ದಾರೆ, ಸ್ಪೆಷಾಲಿಟಿ ಆಸ್ಪತ್ರೆ ಶೀಘ್ರವೇ ನಿರ್ಮಾಣ ಮಾಡಬೇಕು ಎಂದು ಮನವಿಯಲ್ಲಿ ತಿಳಿಸಿದರು. ಇದಕ್ಕೆ ಸ್ಪಂದಿಸಿದ ಶಾಸಕ ಶಿವರಾಂ ಹೆಬ್ಬಾರ್ ಅವರು ಇಲಾಖೆಯ ಸಚಿವರ ಗಮಕ್ಕೆ ತಂದು, ಸಿಎಂ ಸಿದ್ದರಾಮಯ್ಯನವರ ಭೇಟಿ ಮಾಡಲಾಗುವುದು. ಈ ಭಾಗಕ್ಕೆ ಸ್ಪೆಷಾಲಿಟಿ ಆಸ್ಪತ್ರೆ ಶೀಘ್ರವೇ ನಿರ್ಮಾಣ ಮಾಡುವಂತೆ ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಶಾಸಕ ಶಿವರಾಂ ಹೆಬ್ಬಾರ್ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂತೋಷ ನಾಯ್ಕ, ಅಹೀಶ ಹೆಗಡೆ ಉಲ್ಲಾಳ, ಎಸ್ ಎನ್ ಹೆಗಡೆ ಹಾಗೂ ಇತರರು ಇದ್ದರು.

# ಜೈನಮುನಿ ಹತ್ಯೆ ಪ್ರಕರಣ; ಸಿಐಡಿಯಿಂದ ಚಾರ್ಜ್ಶೀಟ್ ಸಲ್ಲಿಕೆ

ಬೆಂಗಳೂರು: ಚಿಕ್ಕೋಡಿಯ ಜೈನಮುನಿ ನಂದಿ ಕಾಮಕುಮಾರ ಸ್ವಾಮೀಜಿ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಸಿಐಡಿಯು 500ಕ್ಕೂ ಹೆಚ್ಚು ಪುಟಗಳ ಚಾರ್ಜ್ಶೀಟ್ ಅನ್ನು ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿದೆ.

ಜುಲೈ 5ರ ರಾತ್ರಿ ಜೈನಮುನಿಯನ್ನು ಹಂತಕರು ಕರೆಂಟ್ ಶಾಕ್ ಕೊಟ್ಟು ತುಂಡರಿಸಿ ಬೋರ್ ವೆಲ್ಗೆ ಬಿಸಾಡಿದ್ದರು. ಇದೀಗ ಹಣವಷ್ಟೇ ಅಲ್ಲ. ಜೈನಮುನಿಯ ಬೈಗುಳವೇ



ಕೊಲೆಗೆ ಕಾರಣ ಎಂಬ ಸ್ಫೋಟಕ ಸತ್ಯವನ್ನು ಆರೋಪಿಗಳು ಸಿಐಡಿ ತನಿಖೆಯ ವೇಳೆ ಬಾಯ್ಬಿಟ್ಟಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಚಾರ್ಜ್ಶೀಟ್ನಲ್ಲಿ ಏನಿದೆ.?: ಆರೋಪಿ ನಾರಾಯಣ ಮಾಳಿಯು ಜೈನಮುನಿ ಜೊತೆ ಹೆಚ್ಚು ಒಡನಾಟ ಹೊಂದಿದ್ದನು. ಇತ್ತ ಆರೋಪಿಗಳು ಜೈನಮುನಿ ಬಳಿ 6 ಲಕ್ಷ ಹಣ ಪಡೆದಿದ್ದರು. ಆರೋಪಿಗಳನ್ನು ಹೀಯಾಳಿಸಿ ನಿಂದನೆ ಜೊತೆ ಬೈದ್ದಿದ್ದರು. ಜೈನಮುನಿ ಬೈಗುಳದಿಂದ ಆರೋಪಿ ನಾರಾಯಣ ಕೊಲೆಗೆ ಪ್ಲಾನ್ ಮಾಡಿದ್ದ. ಜೈನಮುನಿ ಒಬ್ಬರೇ ವಾಸವಿದ್ದರಿಂದ ಆರೋಪಿ ಹೆಚ್ಚಿನ ಒಡನಾಟ ಬೆಳೆಸಿದ್ದನು. ಅಂತೆಯೇ ಇತರ ಆರೋಪಿಗಳ ಜೊತೆ ಸೇರಿ ಕೊಲೆ ಮಾಡಿ ಗುರುತು ಪತ್ತೆಯಾಗದಂತೆ ದೇಹ ಕತ್ತರಿಸಿದ. ಬಳಿಕ ಕೊಲೆಗೆ ಬಳಸಿದ್ದ ಮಚ್ಚನ್ನು ಮೇಲ್ಸೇತುವೆ ಮೇಲೆ ಬಿಸಾಡಿದ್ದರು.

ಈ ಮಾರಕಾಸ್ತ್ರಗಳನ್ನು ಸಿಐಡಿ ಅಧಿಕಾರಿಗಳು ವಶಕ್ಕೆ ಪಡೆದಿದ್ದರು. ಸದ್ಯ 10 ಮಂದಿಯ ಸಾಕ್ಷ್ಯಾಧಾರ, 164 ಹೇಳಿಕೆಗಳ ಜೊತೆ ಟೆಕ್ನಿಕಲ್ ಎವಿಡೆನ್ಸ್ ಸಂಗ್ರಹಿಸಿ 500ಕ್ಕೂ ಹೆಚ್ಚು ಪುಟಗಳ ಚಾರ್ಜ್ ಶೀಟ್ ಅನ್ನು ಸಿಐಡಿ ಅಧಿಕಾರಿಗಳು ನ್ಯಾಯಾಲಯಕ್ಕೆ ಸಲ್ಲಿಕೆ ಮಾಡಿದ್ದಾರೆ.

# ಆನಂದ ಅಪ್ಪುಗೋಳ ಆಸ್ತಿ ಮುಟ್ಟುಗೋಲು: ಠೇವಣಿದಾರರಿಗೆ ನಯಾ ಪೈಸೆ ಬಂದಿಲ್ಲ: ಪ್ರತಿಭಟನೆ

ಬೆಳಗಾವಿ: ಸಂಗೊಳ್ಳಿ ರಾಯಣ್ಣ ಸೊಸೈಟಿ ಅಧ್ಯಕ್ಷ ಆನಂದ ಅಪ್ಪುಗೋಳ ಅವರನ್ನು ಬಹುಕೋಟಿ ರೂ. ವಂಚನೆ ಪ್ರಕರಣದಲ್ಲಿ ಸರ್ಕಾರ ಬಂಧಿಸಿ, ಆಸ್ತಿ ಮುಟ್ಟುಗೋಲು ಹಾಕಲಾಗಿದೆ ಆದರೆ, ಗ್ರಾಹಕರಿಗೆ ನ್ಯಾಯ ಸಿಕ್ಕಿಲ, ಠೇವಣಿದಾರರಿಗೆ ನಯಾ ಪೈಸೆ ಬಂದಿಲ್ಲ ಎಂದು ಗ್ರಾಹಕರು ಗುರುವಾರ ಸುವರ್ಣ ಗಾರ್ಡನ್ ಪ್ರತಿಭಟನೆ ನಡೆಸಿದರು.

ಸಂಗೊಳ್ಳಿ ರಾಯಣ್ಣ ಸೊಸೈಟಿಯಿಂದ ಗ್ರಾಹಕರಿಗೆ ವಂಚಿಸಲಾಗಿದೆ. ಆಸ್ತಿ ಮುಟ್ಟುಗೋಲು ಹಾಕಲಾಗಿದೆ. ಆದರೆ ಠೇವಣಿದಾರರಿಗೆ ಸರಿಯಾದ ಹಣ ಸಿಕ್ಕಿಲ್ಲ.

ನಮ್ಮ ಹಣ ಕೇಳಿದರೆ ಬೆಂಗಳೂರಿಗೆ ಬಂದು ದಾಖಲಾತಿ ಸಲ್ಲಿಸಿ ಎಂದು ಕಾಲಹರಣ



ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಸರಕಾರ ಜವಾಬ್ದಾರಿಯಿಂದ ಠೇವಣಿದಾರರ ಹಣವನ್ನು ಮರಳಿಸಬೇಕು.

ಈಗಾಗಲೇ ಸರಕಾರಕ್ಕೆ ನಾವು ದಾಖಲೆಗಳನ್ನು ಸಲ್ಲಿಸಲಾಗಿದೆ. ವಿನಾಕಾರಣ ನಮ್ಮ ಮೇಲೆ ದಾಖಲಾತಿಗಾಗಿ ಕಿರುಕುಳ ನೀಡುತ್ತಿದ್ದಾರೆ ಎಂದು ಆರೋಪಿದರು.

ಸರ್ಕಾರ ಎಂಟು ವರ್ಷವಾದರೂ ನಮ್ಮ ಹೋರಾಟಕ್ಕೆ ನ್ಯಾಯ ಸಿಕ್ಕಿಲ್ಲ, ಗ್ರಾಹಕರಿಗೆ ಸಮಸ್ಯೆ ಅರ್ಥಮಾಡಿಕೊಳ್ಳಬೇಕಿದೆ. ಸರ್ಕಾರ ಮಟ್ಟದಲ್ಲಿ ಈ ವಿಷಯ ಚರ್ಚೆಯಾಗಲಿ ಎಂದು ಮನವಿಯಲ್ಲಿ ತಿಳಿಸಿದರು.

# ವಿವಿಧ ಬೇಡಿಕೆ ಈಡೇರಿಕೆಗೆ ಅಂಗನವಾಡಿ ಕಾರ್ಯಕರ್ತೆಯರ ಒತ್ತಾಯ

ಬೆಳಗಾವಿ: ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು ಸುವರ್ಣಸೌಧ ಸಮೀಪದ ಸುವರ್ಣ ಗಾರ್ಡನ್ ಬಳಿ ಗುರುವಾರ ಬೃಹತ್ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಅಂಗನವಾಡಿ ವರ್ಕರ್ಸ್ ಆಂಡ್ ಹೆಲ್ಪರ್ಸ್ ಫೇಡರೇಷನ್ ಜಿಲ್ಲಾಧ್ಯಕ್ಷ ನಾಗೇಶ ಸಾತೇರಿ ಮಾತನಾಡಿ, ಬೆಳಗಾವಿ ಜಿಲ್ಲೆಯಲ್ಲಿ ಬಹುತೇಕ ಮಿಸಿ ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರು ಮರಾಠಿ ಮಾತ್ರ ಭಾಷೆಯಲ್ಲಿ ಎಸ್ಸೆಸ್ಸೆಲ್ಸಿ ಉತ್ತೀರ್ಣವಾಲ್ಲವೆಂದು ಅವಕಾಶ ವಂಚಿತರಾಗಿದ್ದು, ಈ ಹಿಂದೆ ಸೇರಿದಂತವರಿಗೆ ಮಾರ್ಪಡಿಸಿ ಪದೋನ್ನತಿಗೆ ಅವಕಾಶ ನೀಡಬೇಕು. ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ನೇಮಕಾತಿ ಆದೇಶ ನೀಡುವ ಆದೇಶದಲ್ಲಿ ತಾತ್ಕಾಲಿಕ ನೇಮಕಾತಿ ಎಂಬ ಪದವನ್ನು ಬೇಡಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ತಮ್ಮ 6ನೇ ಗ್ಯಾರೆಂಟಿಯಾದ ಅಂಗನವಾಡಿ ಕಾರ್ಯಕರ್ತೆಯರಿಗೆ 15 ಸಾವಿರ ಸಹಾಯಕಿಯರಿಗೆ 10 ಸಾವಿರ ಗೌರವ ಧನ ನೀಡಲು ಮುಂದಾಗ ರಾಜ್ಯಾಂದ್ಯತ ಅಂಗನವಾಡಿ ಕಾರ್ಯಕರ್ತೆಯರ ಸಹಾಯಕಿಯರ ಒಂದು ಬಾರಿ ಬೌತಿಕ ನೇಮಕಾತಿ ಆದೇಶ ನೀಡಲಾದೆ. ಅದರಲ್ಲೂ ರಾಜ್ಯಾದ್ಯಂತ ಆಯ್ಕೆ ಪ್ರಕ್ರಿಯೆ



ನಡೆದಿದೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಕ್ರಿಯೇಯನ್ನು ಇಲಾಖೆ ತಡೆಹಿಡದಿದ್ದು, ಇದರ ಕುರಿತು ಹೋರಾಟ ನಡೆಸಿದಾಗ ಸಚಿವರು ಸಭೆ ಮಾಡಿ ಆಯ್ಕೆಗೆ ಕೂಡಲೇ ಆದೇಶ ನೀಡುವದಾಗ ಆಶ್ವಾಸಣೆ ಕೊಟ್ಟಂತೆ ಸಚಿವರು ಆದೇಶ ನೀಡಬೇಕು ಎಂದು ಒತ್ತಾಯಿಸಿದರು.

ಬೇಡಿಕೆಗಳು: ಅಂಗನವಾಡಿ ಕೇಂದ್ರಗಳ ಸ್ವಚ್ಚತೆ ಮತ್ತು ಸಭೆಗಳ ನಿರ್ವಹಣೆಗೆ ಸಾದಿಲ್ವಾರು ಹಣ ಹೆಚ್ಚಿಸಬೇಕು ಹಾಗೂ ಕಳೆದೆರಡು ವರ್ಷಗಳ ಬಾಕಿ ಇರುವ ಫ್ಲೆಗ್ಡೆ ಫಂಡ ಇಸಿಸಿಢ ಪುಸ್ತಕ ನಿರ್ವಹಣೆ ವೆಚ್ಚವನ್ನು ಬಿಡುಗಡೆ ಮಾಡಬೇಕು, ರಾಜ್ಯಾದಂತ ಅಂಗನವಾಡಿಗಳಿಗೆ ಅಗತ್ಯವಾಗಿ ಬೇಕಾದ ಮೂಲ ಭೂತಸೌಕರ್ಯ : ಊಟಕ್ಕೆ ತಟ್ಟೆ ಲೋಟಗಳು ಮಕ್ಕಳು ಮಲಗಲು ಜಮಖಾನ ಕುರ್ಚಿ ಟೇಬಲ ಬೀರು ಆಟದ ಸಾಮಗ್ರಿಗಳನ್ನು ಸಂಗ್ರಹಿಸಿಡಲು ಕಪಾಟುಗಳು ಇತ್ಯಾದಿಗಳನ್ನು ಒದಗಿಸಲು ಕ್ರಮವಹಿಸಬೇಕು, 01-04-2023 ರಿಂದ ನಿವೃತ್ತಿಯಾದವರಿಗೆ ಗ್ರಾಚ್ಯುಟಿ ನೀಡುತ್ತೇವೆಂದು ಆದೇಶವನ್ನು ಹಿಂದಿನ ಸರ್ಕಾರ ನೀಡಿದೆ ಅಂದಿನಿಂದ ಇಲ್ಲಿವರೆಗೂ 2500 ಕಾರ್ಯಕರ್ತೆಯರು ಮತ್ತು ಸಹಾಯಕಿಯರು ನಿವೃತ್ತಿಯಾಗಿದ್ದಾರೆ ಯಾರಿಗೂ ಗ್ರಾಚ್ಯುಟಿ ಹಣ ಕೊಟ್ಟಿಲ್ಲ ಇಲಾಖೆ ಕೊಡಲೇ ಬಿಡುಗಡೆ ಮಾಡಬೇಕು, ತೀವ್ರ ಸ್ವರೂಪದ ಖಾಯಿಲೆಗಳಿಗೆ ತುತ್ತಾಗಿರುವ ಅನಾರೋಗ್ಯ ಪೀಡಿತರಾಗಿರುವವರಿಗೆ ಪರಿಹಾರ ಧನ 3 ಲಕ್ಷ ನೀಡಿ ಸ್ವಯಂ ನಿವೃತ್ತಿಗೆ ಅವಕಾಶ ನೀಡುವಂತೆ ಹಿಂದಿನ ಬಜೆಟನಲ್ಲಿ ಘೋಷಿಸಿದಂತೆ ಜಾರಿಮಾಡಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿರಿಸಲಾಗಿದೆ.

ಪ್ರತಿಭಟನೆಯಲ್ಲಿ ವೈ. ಬಿ. ಶಿಗೆಹಳ್ಳಿ, ಮೀನಾಕ್ಷಿ ಕೋಟಗಿ, ಗೀತಾ ಬೋಸ್ಲೆ, ಸವಿತಾ ಡಿಗ್ರಿ, ಮಲಪ್ರಭಾ ಹ್ಯಾಗಿ, ಮಂಜುಳಾ ಖಂಡೋಜಿ, ಸುಶಿಲಾ ಎಚ್, ಮಂಗಲ ಪಾಟೀಲ, ದ್ರಾಕ್ಷಿಯಿಣಿ ಕೋಲಕಾರ, ಮಲಪ್ರಭಾ ಹ್ಯಾಗಿ ಸೇರದಿಂತೆ ಅನೇಕ ಸಂಖ್ಯೆಯಲ್ಲಿ ಎಐಟಿಯುಸಿ ಕಾರ್ಯಕರ್ತೆಯರು ಭಾಗವಹಿಸಿದ್ದರು.

## ಗೂಳಿಹಟ್ಟಿ ಶೇಖರ್ ಗೆ ಆದ ಅನುಭವ ನನಗೂ ಆಗಿದೆ, ನಾನೂ ಬಿಜೆಪಿಯಲ್ಲಿದ್ದೆ: ಮುಖ್ಯಮಂತ್ರಿ ಚಂದ್ರು



ಹುಬ್ಬಳ್ಳಿ: ಬಿಜೆಪಿ ಮಾಜಿ ಶಾಸಕ ಗೂಳಿಹಟ್ಟಿ ಶೇಖರ್ ಅವರಿಗೆ ಆದ ಅನುಭವ ನನಗೂ ಆಗಿದೆ. ನಾನೂ ಬಿಜೆಪಿಯಲ್ಲಿ ಇದ್ದು ಬಂದವನು ಎಂದು ಎಎಪಿ ರಾಜ್ಯಾಧ್ಯಕ್ಷ ಮುಖ್ಯಮಂತ್ರಿ ಚಂದ್ರು ಅವರು ಗುರುವಾರ ಹೇಳಿದ್ದಾರೆ.

ಹುಬ್ಬಳ್ಳಿಯಲ್ಲಿ ಜಾತಿ ಕಾರಣಕ್ಕೆ ನಾಗ್ಪುರದ ಆರ್ ಎಸ್ಎಸ್ ಕಚೇರಿಯಲ್ಲಿರುವ ಹೆಡಗೇವಾರ್ ಸ್ಮಾರಕದೊಳಗೆ ಬಿಡಲಿಲ್ಲ ಎಂದು ಗೂಳಿಹಟ್ಟಿ ಶೇಖರ್ ಆರೋಪಿಸಿದ್ದು, ಈ ಬಗ್ಗೆ ಪ್ರತಿಕ್ರಿಯಿಸಿದ ಆಪ್ ನಾಯಕ, ಜಾತಿ ಕಾರಣಕ್ಕೆ ಪ್ರವೇಶ ನಿರಾಕರಿಸಿದ್ದರೆ ಖಂಡನೀಯ ಎಂದರು.

ಈ ಹಿಂದೆ ನಾನು ಬಿಜೆಪಿಯಲ್ಲಿದ್ದಾಗ ಹಲವು ಸಭೆಗಳಿಗೆ ಆಹ್ವಾನವೇ ನೀಡುತ್ತಿರಲಿಲ್ಲ. ನಿಖರ ಕಾರಣ ಹೇಳದೆ ದೂರುವಿಡುತ್ತಿದ್ದರು. ಆದರೆ ಗೂಳಿಹಟ್ಟಿ ಶೇಖರ್ ಹೇಳಿಕೆ ನಂತರ ಮನವರಿಕೆಯಾಗುತ್ತಿದೆ ಎಂದು ಮುಖ್ಯಮಂತ್ರಿ ಚಂದ್ರು ಹೇಳಿದ್ದಾರೆ. ಇದೇ ವೇಳೆ, ವೈಜ್ಞಾನಿಕವಾಗಿ ಮೀಸಲಾತಿ ಸೌಲಭ್ಯ ದೊರೆಯಲು ದೇಶಾದ್ಯಂತ ಜಾತಿ ಗಣತಿ ನಡೆಸಬೇಕು ಎಂದು ಆಮ್ ಆದ್ಮಿ ಪಕ್ಷದ ಅಧ್ಯಕ್ಷರು ಆಗ್ರಹಿಸಿದರು.

## ಲಾರಿ-ಟಾಟಾ ಏಸ್ ನಡುವೆ ಡಿಕ್ಕಿ: ನಾಲ್ವರ ದುರ್ಮರಣ

ರಾಯಚೂರು: ಜಿಲ್ಲೆಯ ಸಿಂಧನೂರು ತಾಲೂಕಿನ ಪಗಡದಿನ್ನಿ ಕ್ಯಾಂಪ್ ಬಳಿ ಲಾರಿ ಹಾಗೂ ಟಾಟಾ ಏಸ್ ವಾಹನಗಳ ನಡುವೆ ಡಿಕ್ಕಿಯಾಗಿ ನಾಲ್ವರು ಸಾವನ್ನಪ್ಪಿದ್ದಾರೆ.

ಟಾಟಾ ಏಸ್ನಲ್ಲಿದ್ದ ಅಂಬರೀಶ್ (30) ರಮೇಶ್ (28) ರವಿ (20) ಚಾಲಕ ಇಸ್ಮಾಯಿಲ್ (27) ಮೃತಪಟ್ಟವರು. ಈ ಪೈಕಿ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದು ಓರ್ವ ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಕೊನೆಯುಸಿರೆಳೆದಿದ್ದಾನೆ. ಅಪಘಾತದಲ್ಲಿ ಇನ್ನೋರ್ವನಿಗೆ ಗಂಭೀರ ಗಾಯಗಳಾಗಿದ್ದು ಸಿಂಧನೂರು ತಾಲೂಕಿನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಮೃತರೆಲ್ಲರೂ ಸಿಂಧನೂರಿನ ಸಾಯಿ ಸಂಗಮ್ ಸಪ್ಲಾಯರ್ನ ಕೆಲಸಗಾರರಾಗಿದ್ದು, ಮದುವೆ ಸಮಾರಂಭವೊಂದಕ್ಕೆ ಡೆಕೋರೇಷನ್ ಮಾಡಲು ಹೊರಟಿದ್ದಾಗ ಅಪಘಾತ ಸಂಭವಿಸಿದೆ. ಸಿಂಧನೂರಿನಿಂದ ಮಸ್ಕಿಯ ಮದ್ಲಾಪುರ ಗ್ರಾಮಕ್ಕೆ ಹೊರಟಿದ್ದ ಟಾಟಾ ಏಸ್ ವಾಹನ ಸಿಂಧನೂರು ಕಡೆಗೆ ಬರುತ್ತಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ.

ಘಟನೆ ಸಂಬಂಧ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮರಣೋತ್ತರ ಪರೀಕ್ಷೆಗಾಗಿ ಶವಗಳನ್ನು ಸಿಂಧನೂರು ತಾಲೂಕು ಆಸ್ಪತ್ರೆ ಶವಾಗಾರಕ್ಕೆ ರವಾನಿಸಲಾಗಿದೆ.

# ಹುಕ್ಕೇರಿ ಸರ್ಕಾರಿ ಆಸ್ಪತ್ರೆಗೆ ಮಾಜಿ ಸಂಸದ ರಮೇಶ ಕತ್ತಿ ಭೇಟಿ

ಹುಕ್ಕೇರಿ: ದೇವಸ್ಥಾನಗಳು ಭಾರತ ದೇಶದ ಧಾರ್ಮಿಕ ಹಾಗೂ ಸಾಂಸ್ಕೃತಿಕ ಶ್ರದ್ಧಾ ಕೇಂದ್ರಗಳು ಎಂದು ಮಾಜಿ ಸಂಸದರೂ ಆದ ಡಿಸಿಸಿ ಬ್ಯಾಂಕ್ ಅಧ್ಯಕ್ಷ ರಮೇಶ ಕತ್ತಿ ಅಭಿಪ್ರಾಯಪಟ್ಟರು.

ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಗುರುವಾರ ಶನೇಶ್ವರ ಮಂದಿರದ ಜೀರ್ಣೋದ್ಧಾರದ ಚೌಕಟ್ಟು ಕೂಡ್ರಿಸುವ ಪೂಜಾ ಸಮಾರಂಭದಲ್ಲಿ ಮಾತನಾಡಿದ ಅವರು, ಆಧ್ಯಾತ್ಮಿಕ ತಳಹದಿಯಿಂದಲೇ ಭಾರತ ಸದೃಢ, ಸಶಕ್ತ ರಾಷ್ಟ್ರವಾಗಿ ಹೊರಹೊಮ್ಮಿದೆ. ಶಾಸಕರ ಅನುದಾನದಡಿ 40 ಲಕ್ಷ ರೂ ವೆಚ್ಚದಲ್ಲಿ ಸುಸಜ್ಜಿತ ಶನಿಮಂದಿರ ನಿರ್ಮಾಣ ಮಾಡಲಾಗುವುದು ಎಂದರು.

ಪ್ರತಿಯೊಬ್ಬರೂ ತಮ್ಮ ದೈನಂದಿನ ಚಟುವಟಿಕೆಗಳ ಜತೆಗೆ ಸ್ವಲ್ಪ ಸಮಯವನ್ನು ಆಧ್ಯಾತ್ಮಿಕತೆಯಲ್ಲಿ ತೊಡಗಿಸಿಕೊಂಡರೆ ನೆಮ್ಮದಿ ಪ್ರಾಪ್ತಿಯಾಗುತ್ತದೆ.

ಆಧ್ಯಾತ್ಮಿಕ ಸಾಧನೆಯಿಂದ ಸಾಂಸಾರಿಕ ಮತ್ತು ಪಾರಮಾರ್ಥಿಕವಾಗಿ ಬದುಕಿನಲ್ಲಿ ಯಶಸ್ವಿ ಗಳಿಸಲು ಸಾಧ್ಯವಿದೆ. ಪ್ರಸ್ತುತ ಮಾನವೀಯ ಮೌಲ್ಯಗಳನ್ನು ಅಳಡಿಸಿಕೊಳ್ಳುವ ಅಗತ್ಯವಿದೆ. ಮಾನವನ ಬದುಕು ಕೇವಲ ಹೊಟ್ಟೆಪಾಡಿಗಾಗಿ ಸೀಮಿತವಾಗದೇ ಸಾಮಾಜಿಕ ಕಳಕಳಿ ಹೊಂದಿದರೆ



ಜೀವನಕ್ಕೆ ಪರಿಪೂರ್ಣತೆ ಬರುತ್ತದೆ ಎಂದು ಅವರು ಹೇಳಿದರು.

ರಾಜೇಶ್ವರಿ ವಿಶ್ವನಾಥ ಕತ್ತಿ ಧರ್ಮಾರ್ಥ ಟ್ರಸ್ಟ್ ವತಿಯಿಂದ ಆಸ್ಪತ್ರೆಯ ಒಳರೋಗಿಗಳಿಗೆ ಉಚಿತವಾಗಿ ವಿತರಿಸುವ ಊಟದ ವ್ಯವಸ್ಥೆಯನ್ನು ಪರಿಶೀಲಿಸಿದ ರಮೇಶ ಕತ್ತಿ, ಬಳಿಕ ವಿವಿಧ ವಾರ್ಡ್ಗಳಿಗೆ ತೆರಳಿ ವೈದ್ಯಕೀಯ ಚಿಕಿತ್ಸೆ ಮತ್ತು ಔಷದೋಪಚಾರ ಕುರಿತು ರೋಗಿಗಳಿಂದ ಮಾಹಿತಿ ಪಡೆದುಕೊಂಡರು.

ಇದೇ ವೇಳೆ ಆಸ್ಪತ್ರೆಯ ಆವರಣದಲ್ಲೇ ನಿರ್ಮಾಣ ಹಂತದ ವೈದ್ಯ-ಸಿಬ್ಬಂದಿಗಳ ವಸತಿ ಸಮುಚ್ಚಯ ಕಾಮಗಾರಿಯನ್ನು ಪರಿಶೀಲಿಸಿದ ಅವರು, ಗುಣಮಟ್ಟ ಕಾಮಗಾರಿಯೊಂದಿಗೆ ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಹಿರಾಶುಗರ ನಿರ್ದೇಶಕ ಅಶೋಕ ಪಟ್ಟಣಶೆಟ್ಟಿ, ಆಸ್ಪತ್ರೆ ಸಿಎಂಒ ಡಾ.ಎಂ. ಎಂ.ನರಸನ್ನವರ, ಅಭಿಯಂತರ ಪ್ರಭಾಕರ ಕಾಮತ, ನಿವೃತ್ತ ಅಧಿಕಾರಿ ಎ.ಬಿ.ಪಟ್ಟಣಶೆಟ್ಟಿ, ಗುತ್ತಿಗೆದಾರರಾದ ಪುಂಡಲೀಕ ನಂದಗಾಂವಿ, ರಾಜು ಪಾಟೀಲ, ಬಸವರಾಜ ಗಂಗಣ್ಣವರ, ಮುಖಂಡರಾದ ರಾಜು ಮುನ್ನೋಳಿ, ಗುರು ಕುಲಕರ್ಣಿ, ಪ್ರಜ್ವಲ ನಿಲಜಗಿ, ಸುಹಾಸ ನೂಲಿ, ಮಧುಕರ ಕರನಿಂಗ, ಕುಮಾರ ಜುಟಾಳೆ, ಗಿರೀಶ ಕುಲಕರ್ಣಿ, ಚನ್ನಪ್ಪ ಗಜಬರ, ಮಾರುತಿ ಪವಾರ, ಗಿರೀಶ ಪಾಟೀಲ, ಮುನ್ನಾ ಕಳಾವಂತ, ಆರೋಗ್ಯ ಸಿಬ್ಬಂದಿಗಳಾದ ಉದಯ ಹಜಾರೆ, ಸರಸ್ವತಿ ದೊಡಭಂಗಿ, ಶ್ರೀದೇವಿ ಶಿರೆಪ್ಪನ್ನವರ ಮತ್ತಿತರರು ಉಪಸ್ಥಿತರಿದ್ದರು.

# ಬಳಗಾನೂರ ಪಿಕೆಪಿಎಸ್ ಗೆ ಅವಿರೋಧ ಆಯ್ಕೆ



ತಾಳಿಕೋಟಿ: ತಾಲೂಕಿನ ಬಳಗಾನೂರ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿಯಮಿತ ಇದರ ಅಧ್ಯಕ್ಷ ಉಪಾಧ್ಯಕ್ಷರ ಆಯ್ಕೆ ಕುರಿತು ಗುರುವಾರದಂದು ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ನೀಲಪ್ಪ ಬ ನರಸುಣಗಿ, ಉಪಾಧ್ಯಕ್ಷರಾಗಿ ಶಿವಪ್ಪ ಕ ಸಾಸನೂರ, ಅವರು ಅವಿರೋಧವಾಗಿ ಆಯ್ಕೆಗೊಂಡರು.

ಚುನಾವಣೆ ನಿಗದಿಪಡಿಸಿದ ಪ್ರಕ್ರಿಯೆಯಂತೆ ಅಧ್ಯಕ್ಷ ಸ್ಥಾನಕ್ಕೆ ನೀಲಪ್ಪ ನರಸುಣಗಿ, ಉಪಾಧ್ಯಕ್ಷ ಸ್ಥಾನಕ್ಕೆ ಶಿವಪ್ಪ ಸಾಸನೂರ, ಅವರು ತಲಾ ಒಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅಧ್ಯಕ್ಷರಾಗಿ ನೀಲಪ್ಪ ನರಸುಣಗಿ , ಉಪಾಧ್ಯಕ್ಷರಾಗಿ ಶಿವಪ್ಪ ಸಾಸನೂರ ,ಅವರು ಅವಿರೋಧವಾಗಿ ಆಯ್ಕೆಗೊಂಡಿದ್ದಾರೆಂದು ಚುನಾವಣಾಧಿಕಾರಿ ವಿಜಯಕುಮಾರ್ ಉತ್ನಾಳ ಅವರು ಘೋಷಿಸಿದರು.

ಒಟ್ಟು11 ಜನ ನಿರ್ದೇಶಕರನ್ನು ಹೊಂದಿರುವ ಈ ಸಂಘದ ಅಧ್ಯಕ್ಷ -ಉಪಾಧ್ಯಕ್ಷರ ಚುನಾವಣಾ ಪ್ರಕ್ರಿಯೆಯಲ್ಲಿ ಆರು ಜನ ನಿರ್ದೇಶಕರು ಭಾಗವಹಿಸಿದ್ದರು. ಚುನಾವಣಾ ಪ್ರಕ್ರಿಯೆಯಲ್ಲಿ ಚುನಾವಣಾಧಿಕಾರಿಯಾಗಿ ವಿಜಯಕುಮಾರ್ ಉತ್ನಾಳ ಸಹಾಯಕರಾಗಿ ಪಿಕೆಪಿಎಸ್ ನ ಮುಖ್ಯ ಕಾರ್ಯನಿರ್ವಾಹಕ ಮಲ್ಲನಗೌಡ ಬಿರಾದಾರ ವೀರೇಶ್ ಬಾಗೆವಾಡಿ ಕಾರ್ಯನಿರ್ವಹಿಸಿದರು.

ವಿಜಯೋತ್ಸವ: ಬಳಗಾನೂರು ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಪತ್ತಿನ ಸಹಕಾರಿ ಸಂಘದ ನೂತನ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಗೊಂಡ ನೀಲಪ್ಪ ನರಸುಣಗಿ, ಉಪಾಧ್ಯಕ್ಷ ಶಿವಪ್ಪ ಸಾಸನೂರ, ಅವರು ತಮ್ಮ ಬೆಂಬಲಿಗರೊಂದಿಗೆ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಈ ವೇಳೆ ಸಂಘದ ನಿರ್ದೇಶಕರುಗಳಾದ ಚಂದ್ರಶೇಖರ ಅಲದಿ, ನಿಂಗಣ್ಣ ಹೊಸಮನಿ, ಶ್ರೀಶೈಲ್ ಭಂಟನೂರ, ಈರಮ್ಮ ಬಿರಾದಾರ, ಗಣ್ಯರಾದ ಶಿವನಗೌಡ ಬಿರಾದಾರ, ಮುತ್ತು ಮನಹಳ್ಳಿ, ರಮೇಶ ಪೀರಾಪೂರ, ಬಸವರಾಜ ನರಸಣಗಿ, ಶಂಕರ್ ಗೌಡ ಬಿರಾದಾರ, ನೀಲಣ್ಣ ಬಿರಾದಾರ, ಭೀಮು ಸಜ್ಜನ, ಭೀಮನಗೌಡ ಬಿರಾದಾರ, ಮುತ್ತಣ್ಣ ನರಸಣಗಿ, ಅಮರೇಶ ಗೌಡ ಪಾಟೀಲ, ಪ್ರಭು ಪತ್ತೆಪೂರ, ಮಂಜುನಾಥ ಮಸಬಿನಾಳ, ಶೇಕು ಮಡಿವಾಳರ, ಬಸನಗೌಡ ಬಿರಾದಾರ, ಬಾಪುಗೌಡ ಬಿರಾದಾರ, ಕಾಶಿನಾಥ್ ತಳವಾರ, ಬಸವರಾಜ ತಳವಾರ, ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಅಧ್ಯಾತ್ಮದಿಂದ ಸರ್ವರೋಗ ದೂರ: ಡಾ. ಕೋಮಲ್ ದಲಾಲ್

ಬೆಳಗಾವಿ: ಯಾವುದೇ ವ್ಯಕ್ತಿ ತನ್ನ ವೃತ್ತಿ ಜೀವನದ ಜೊತೆಗೆ ತನ್ನನ್ನು ಆಧ್ಯಾತ್ಮ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡರೆ ಆತ ಸರ್ವ ರೋಗಗಳಿಂದ ಮುಕ್ತನಾಗುತ್ತಾನೆ.

ಹಾಗಾಗಿ ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಆಧ್ಯಾತ್ಮ ಸಾಧನೆಗೆ ಒತ್ತು ನೀಡಬೇಕೆಂದು ಮುಂಬೈನ ಆಧ್ಯಾತ್ಮ ಕೇಂದ್ರ ಭಕ್ತಿ ವೇದಾಂತ ಆಸ್ಪತ್ರೆಯ ಡಾ. ಕೋಮಲ್ ದಲಾಲ್ ಅಭಿಪ್ರಾಯಪಟ್ಟರು.

ಅವರು ಬೆಳಗಾವಿಯ ಆರ್ ಎನ್ ಶೆಟ್ಟಿ ಪಾಲಿಟೆಕ್ನಿಕ್ ಕಾಲೇಜಿನ ಆವರಣದಲ್ಲಿ ನಾಗನೂರು ಶ್ರೀ ರುದ್ರಾಕ್ಷಿ ಮಠದ ಡಾ. ಶಿವಬಸವ ಮಹಾಸ್ವಾಮಿಜಿಯವರ 134 ನೇ ಜಯಂತಿ ಮಹೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಸಿದ್ಧರಾಮೇಶ್ವರ ಶಿಕ್ಷಣ ಸಂಸ್ಥೆಯ ಹಳೆಯ ವಿದ್ಯಾರ್ಥಿಗಳ ಸಮಾವೇಶದಲ್ಲಿ ಆತ್ಮ ಸ್ವಾಸ್ಥ ಶ್ರೀ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದರು. ಮುಂದುವರೆದು ಮಾತನಾಡಿದ ಅವರು ವ್ಯಕ್ತಿಯು ದೈಹಿಕವಾಗಿ ಮಾತ್ರವಲ್ಲ ಮಾನಸಿಕವಾಗಿಯೂ ಸ್ವಸ್ಥವಾಗಿದ್ದಾಗ ಮಾತ್ರ ಸಂಪೂರ್ಣವಾಗಿ ಆರೋಗ್ಯವಂತರಾಗಿರುತ್ತಾನೆ.

ಗಂಭೀರವಾದ ರೋಗಗಳನ್ನು ಸಹ



ಆಧ್ಯಾತ್ಮ ಸಾಧನೆಯಿಂದ ಗುಣಪಡಿಸಲು ಸಾಧ್ಯ ಎಂಬುದನ್ನು ನಮ್ಮ ಆಸ್ಪತ್ರೆಯ ಅನೇಕ ರೋಗಿಗಳ ಮೇಲೆ ಪ್ರಯೋಗ ಮಾಡಿ ಯಶಸ್ವಿಯಾಗಿದ್ದೇವೆ ಎಂದರು. ನಾವೆಲ್ಲ ಸರಳ ಜೀವನ ಶೈಲಿ ರೂಡಿಸಿಕೊಳ್ಳಬೇಕು ಇಲ್ಲದಿದ್ದರೆ ಅನಾರೋಗ್ಯ ತಪ್ಪಿದ್ದಲ್ಲ ಎಂದರು.

ಸಮಾರಂಭದ ನೇತೃತ್ವವನ್ನು ನಾಗನೂರು ರುದ್ರಾಕ್ಷಿ ಮಠದ ಡಾ. ಅಲ್ಲಮಪ್ರಭು ಸ್ವಾಮೀಜಿ ಹಾಗೂ ಅಥಣಿ ಮೋಟಗಿ ಮಠದ ಪ್ರಭು ಚನ್ನಬಸವ ಸ್ವಾಮೀಜಿ ವಹಿಸಿದ್ದರು.

ಅರಭಾವಿ ಜಗದ್ಗುರು ದುರದುಂಡೇಶ್ವರ ಸಿದ್ಧ ಸಂಸ್ಥಾನ ಮಠದ ಗುರುಬಸವ ಲಿಂಗ ಮಹಾಸ್ವಾಮಿಜಿ ಸಮಾರಂಭದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ನಾಗನೂರು ರುದ್ರಾಕ್ಷಿ ಮಠದ ಪ್ರಸಾದ ನಿಲಯದ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಬಸವರಾಜ ರೊಟ್ಟಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು.

ಇದೇ ಸಂದರ್ಭದಲ್ಲಿ ನಾಗನೂರು ರುದ್ರಾಕ್ಷಿ ಮಠದ ವತಿಯಿಂದ ಕೊಡಮಾಡುವ ಪ್ರಸಾದ ಶ್ರೀ ಪ್ರಶಸ್ತಿಯನ್ನು ಬೆಳಗಾವಿಯ ವೈ.ಎನ್. ಶಿಂತ್ರೆ, ಶೇಗುಣಸಿಯ ಮಲ್ಲಪ್ಪ ಬಸಗೌಡ ಗೌಡಪ್ಪನವರ, ಬೆಳಗಾವಿಯ ಬಸಲಿಂಗಪ್ಪ ರುದ್ರಪ್ಪ ಮೆಳವಂಕಿ ಹಾಗೂ ಜಿ.ಎನ್. ಪಾಟೀಲ್ ಅವರಿಗೆ ನೀಡಲಾಯಿತು.

ಅದಲ್ಲದೆ ಖ್ಯಾತ ಸಂಗೀತ ಕಲಾವಿದರಾದ ಬೆಂಗಳೂರಿನ ಅಮರೇಶ್ ಗವಾಯಿ, ವೈಯಲಿನ್ ವಾಧಕ ಮೈಸೂರಿನ ವಿದ್ವಾನ್ ರವಿಕುಮಾರ್ ಹಾಗೂ ತಬಲವಾದಕ ಬೆಂಗಳೂರಿನ ಹನುಮಂತರಾಯ ಚಿಕ್ಕೊಟ್ನೇಕಲ್ ಅವರನ್ನು ಸತ್ಕರಿಸಲಾಯಿತು.

ಪ್ರಾರಂಭದಲ್ಲಿ ಜೆ.ಎನ್. ವೈದ್ಯಕೀಯ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಡಾ. ಎಚ್. ಬಿ. ರಾಜಶೇಖರ್ ಸ್ವಾಗತಿಸಿ ಪ್ರಸ್ತಾವಿಕವಾಗಿ ಮಾತನಾಡಿದರು. ರಾಜಶೇಖರ ಪಾಟೀಲ ನಿರೂಪಿಸಿದರು. ಕೊನೆಯಲ್ಲಿ ಮಂಜುನಾಥ ಶರಣಪ್ಪನವರ ವಂದಿಸಿದರು.


RNI: KARKAN/2020/79084 Regn,No:G-2/PMG/KA/NK/BM/139/2021-23

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089